ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 12 RNI Number : KNKAN/25/A2770 13-01-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :12 ರಾಯಚೂರು 13-01-2026 ಮಂಗಳವಾರ ಪುಟ 04 ಬೆಲೆ ರೂ.2/- ಮೊ:8660146563

ಖರ್ಗೆ ಭೇಟಿ ಮಾಡಿದ ಡಿಕೆಶಿ, ಕೆರಳಿದ ಕುತೂಹಲ

ಬೆಂಗಳೂರು, ಜ.12-

ಅಧಿಕಾರ ಹಂಚಿಕೆಯ ಗೊಂದಲಗಳು ತ್ರಿಶಂಕುಸ್ಥಿತಿಯಲ್ಲಿರುವ ನಡುವೆಯೇ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಬೆಂಗಳೂರಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿರುವುದು ಕುತೂಹಲ ಕೆರಳಿಸಿದೆ.

ಎಐಸಿಸಿ ಪ್ರಧಾನ ಕಾರ್ಯ ದರ್ಶಿ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ನಾಯಕ ರಣದೀಪ್ ಸಿಂಗ್ ಸುರ್ಜೇವಾಲ ಬೆಂಗಳೂರಿಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಡಿ.ಕೆ.ಶಿವಕುಮಾರ್ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರ ಭೇಟಿ ಭಾರಿ ಬದಲಾವಣೆ ಬದಲಾವಣೆಯ ಮುನ್ಸೂ ಚನೆ ನೀಡಿದೆ.

ನಿನ್ನೆಯಷ್ಟೇ ಒಕ್ಕಲಿಗ ಉದ್ಯಮಿ ಎಕ್ಸ್ ಪೋದಲ್ಲಿ ಮಾತನಾಡಿದ್ದ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಮೇಲೆ ತಮಗೆ ವಿಶ್ವಾಸವಿದ್ದು, ಅವಕಾಶ ದೊರೆಯಲಿದೆ ಎಂದು ಹೇಳಿದರು.

ನಾನು ಕಷ್ಟಪಟ್ಟು ಹೊಡೆದು, ಬಡಿದು, ಪೆಟ್ಟು ತಿಂದು ಇಲ್ಲಿಯವರೆಗೂ ಬಂದಿದ್ದೇನೆ. ನನ್ನನ್ನು ಬಂಡೆ ಎಂದು ಸುಮನೆ ಕರೆಯುವುದಿಲ್ಲ. ಬಂಡೆ ಕೆತ್ತಿದಾಗ ಮೂರ್ತಿಯಾಗುತ್ತದೆ. ಚಿನ್ನ ಕಾಯಿಸಿದಾಗ ಹೊಳೆಯುತ್ತದೆ. ಮುಂದಿನ ದಿನಗಳಲ್ಲಿ ಪಕ್ಷ ನನಗೆ ಸೂಕ್ತ



ಅವಕಾಶ ನೀಡಲಿದೆ ಎಂಬ ಅರ್ಥದ ಆತವಿಶ್ವಾಸದ ಮಾತುಗಳನ್ನಾಡಿದರು. ಸಮುದಾಯದ ಜನ ತಲೆ ಕೆಡಿಸಿಕೊಳ್ಳಬಾರದು ಎಂದು ಹೇಳಿದ್ದರು.

ರಣದೀಪ್ ಸಿಂಗ್ ಸುರ್ಜೇವಾಲ ರಾಜ್ಯಕ್ಕೆ ಭೇಟಿ ನೀಡುವ ಮುನ್ಸೂ ಚನೆ ದೊರೆಯುತ್ತಿದ್ದಂತೆ ಡಿ.ಕೆ.ಶಿವಕುಮಾರ್ ವರಿಷ್ಠ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿರುವುದು ನಾನಾ ರೀತಿಯ ಬೆಳವಣಿಗೆಗಳಿಗೆ ಮುನ್ಸೂ ಚನೆ ನೀಡಿದೆ.

ಇಷ್ಟು ದಿನ ರಾಜ್ಯ ರಾಜಕಾರಣದಿಂದ ದೂರವಿದ್ದಂತಹ ರಣದೀಪ್ ಸಿಂಗ್ ಸುರ್ಜೇವಾಲ ಆರು ತಿಂಗಳ ಬಳಿಕ ರಾಜ್ಯಕ್ಕೆ ಆಗಮಿಸುತ್ತಿದ್ದಾರೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ ಮತ್ತು ಡಿಕೆ ಶಿವಕುಮಾರ್ ಅವರ ಬಣ ಪರಸ್ಪರ ಶಕ್ತಿ ಪ್ರದರ್ಶನ ಮಾಡುವ ತಯಾರಿ ನಡೆಸಿಕೊಂಡಿವೆ.

ತಾವು ಪಕ್ಷದ ಅಧ್ಯಕ್ಷರಾಗಿರುವುದರಿಂದ ಶಿಸ್ತು ಉಲ್ಲಂಘನೆಯಾಗಬಾರದು ಎಂಬ ಕಾರಣಕ್ಕಾಗಿ ಡಿ.ಕೆ.ಶಿವಕುಮಾರ್ ಪ್ರತಿ ಹಂತದಲ್ಲೂ ತಮ ಬೆಂಬಲಿಗರನ್ನು ಹತೋಟಿಯಲ್ಲಿಡುವ ಪ್ರಯತ್ನ ಮಾಡುತ್ತಿದ್ದಾರೆ. ಆದರೆ ಹೈಕಮಾಂಡ್ ನಾಯಕರು ರಾಜ್ಯದ ಬೆಳವಣಿಗೆಗಳ ಬಗ್ಗೆ ಅನಾದರಣೆಯಿಂದ ನಡೆದುಕೊಳ್ಳುತ್ತಿರುವುದು ಕಂಡುಬಂದಿದೆ. ನಾಯಕತ್ವದ ಗೊಂದಲದಲ್ಲಿ ಹೈಕಮಾಂಡ್ ತಲೆ ಹಾಕುವುದಿಲ್ಲ ಎಂದು ಸಂದೇಶ ನೀಡಿದ ಬೆನ್ನಲ್ಲೆ ಸಿದ್ದರಾಮಯ್ಯ ಅವರ ಬಣ ಸಂಭ್ರಮಾಚರಣೆಯಲ್ಲಿ ತೊಡಗಿಸಿಕೊಂಡಿದೆ. ಹೈಕಮಾಂಡ್ ಮಧ್ಯ ಪ್ರವೇಶಿಸದೇ ಇದ್ದರೆ ನಾಯಕತ್ವ ಬದಲಾವಣೆಯೊಂದಿಗೆ ಮರೀಚಿಕೆಯಾಗಬಹುದು. ಐದು ವರ್ಷ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಅಬಾಧಿತವಾಗಿ ಆಡಳಿತ ನಡೆಸಬಹುದು ಎಂಬ ಲೆಕ್ಕಾಚಾರಗಳು ನಡೆಯುತ್ತಿವೆ.

ನಿರೀಕ್ಷೆಯಂತೆ ರಣದೀಪ್ ಸಿಂಗ್ ಸುರ್ಜೇವಾಲ ಅಖಾಡ ಪ್ರವೇಶಿಸಿದರೆ ಈವರೆಗಿನ ರಾಜಕೀಯ ಬೆಳವಣಿಗೆಗಳು ಭವಿಷ್ಯದಲ್ಲಿ ತಿರುವುಮುರುವಾಗುವ ಸಾಧ್ಯತೆ ಇದೆ. ರಾಹುಲ್ ಗಾಂಧಿಯವರ ಪರಮಾಪ್ತರಾಗಿರುವ ಕೆ.ಸಿ.ವೇಣುಗೋಪಾಲ್ ಈವರೆಗೂ ಸಿದ್ದರಾಮಯ್ಯ ಅವರಿಗೆ ಅಭಯ ಹಸ್ತ ನೀಡುತ್ತಾ ಬಂದಿದ್ದಾರೆ.

ಹೈಕಮಾಂಡ್ ಅನ್ನು ಈವರೆಗೂ ನಂಬುತ್ತಲೇ ಇರುವ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿಂದು ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಮಹತ್ವದ ಚರ್ಚೆ ನಡೆಸಿದ್ದಾರೆ. ಹೈಕಮಾಂಡ್ ನಾಯಕರ ಸಮುಖದಲ್ಲಿ ಒಪ್ಪಂದವಾದಂತೆ ತಮಗೆ ಮುಖ್ಯಮಂತ್ರಿ ಆಗಲು ಅವಕಾಶ ನೀಡಬೇಕು. ಇಲ್ಲದೆ ಹೋದರೆ ಶಾಸಕರನ್ನು ನಿಯಂತ್ರಿಸುವುದು ಕಷ್ಟವಾಗಲಿದೆ. ಸರ್ಕಾರ ಮತ್ತು ಪಕ್ಷ ಸಂಘಟನೆಯ ಮೇಲೂ ಪರಿಣಾಮ ಬೀರಲಿದೆ ಎಂಬ ಎಚ್ಚರಿಕೆಯನ್ನು ಡಿ.ಕೆ. ಶಿವಕುಮಾರ್ ನೀಡಿದ್ದಾರೆ ಎನ್ನಲಾಗುತ್ತದೆ.

ಈಗಾಗಲೇ ಕೆಲವು ರಾಜಕೀಯ ಪರಿಸ್ಥಿತಿಗಳಿಂದಾಗಿ ಇಕ್ಕಟ್ಟಿಗೆ ಸಿಲುಕಿರುವ ಕಾಂಗ್ರೆಸ್ ಹೈಕಮಾಂಡ್, ಡಿ.ಕೆ.ಶಿವಕುಮಾರ್ ಬಿಗಿ ಪಟ್ಟು ಹಿಡಿದು ಬೇರೆ ರೀತಿಯ ರಾಜಕಾರಣ ಮಾಡಿದರೆ ಅದು ಮತ್ತೊಂದು ರೀತಿಯ ತೊಂದರೆಯುಂಟು ಮಾಡುವ ಆತಂಕ ನಿರ್ಮಾಣವಾಗಿದೆ.

ಒಂದೆಡೆ ಡಿ.ಕೆ.ಶಿವಕುಮಾರ್ ಅವರನ್ನು ಸಮಾಧಾನ ಪಡಿಸುವ ಪ್ರಯತ್ನ ನಡೆಯುತ್ತಿದ್ದು, ಮತ್ತೊಂದೆಡೆ ಸಿದ್ದರಾಮಯ್ಯ ಅವರ ಮನವೊಲಿಸುವ ಪ್ರಯತ್ನಗಳು ನಡಯುತ್ತಿವೆ ಎಂದು ಹೇಳಲಾಗುತ್ತಿದೆ.

ರಾಷ್ಟ್ರೀಯ ಯುವ ದಿನದಂದು ರಾಯಚೂರಿನಲ್ಲಿ ಐತಿಹಾಸಿಕ ಸ್ವಚ್ಛತಾ ಓಟ

ಸಂಸದ ಜಿ. ಕುಮಾರ್ ನಾಯಕ್ ನೇತೃತ್ವದಲ್ಲಿ 3000ಕ್ಕೂ ಅಧಿಕ ಜನರ ಭಾಗಿ

ರಾಯಚೂರು,ಜ.12-

ಸ್ವಚ್ಛ ಭಾರತ ಮಿಷನ್ ಹಾಗೂ ರಾಯಚೂರು ಉತ್ಸವ-2026ರ ಅಂಗವಾಗಿ ಇಂದು ರಾಯಚೂರು ಮಹಾನಗರ ಪಾಲಿಕೆ ಮತ್ತು ಜಿಲ್ಲಾಡಳಿತದ ಸಂಯುಕ್ತ ಆಶ್ರಯದಲ್ಲಿ ಸ್ವಚ್ಛತಾ ಓಟ ಅನ್ನು ಭವ್ಯವಾಗಿ ಆಯೋಜಿಸಲಾಯಿತು. ಕಾರ್ಯಕ್ರಮಕ್ಕೆ ಲೋಕಸಭಾ ಸಂಸದರಾದ ಜಿ. ಕುಮಾರ್ ನಾಯಕ್ ಅವರು ನೇತೃತ್ವ ವಹಿಸಿ ಸ್ವಚ್ಛತಾ ಓಟಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು, ಮಹಾನಗರ ಪಾಲಿಕೆ ಆಯುಕ್ತರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಅಪರ ಜಿಲ್ಲಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು



ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಮಾನ್ಯ ಸಂಸದರು, ಸ್ವಾಮಿ ವಿವೇಕಾನಂದರ ಆದರ್ಶಗಳು, ಸದೃಢ ಶರೀರ-ಮನಸ್ಸಿನ ಮಹತ್ವ ಹಾಗೂ ಸ್ವಚ್ಛ ಮತ್ತು ಆರೋಗ್ಯಕರ ವಾತಾವರಣ ನಿರ್ಮಾಣದಲ್ಲಿ ಯುವಜನತೆಯ ಪಾತ್ರ ಕುರಿತು ಮಾತನಾಡಿ, ರಾಯಚೂರು ಮಹಾನಗರದ ಜನತೆಗೆ ಸ್ವಚ್ಛತೆಯತ್ತ ಒಗ್ಗಟ್ಟಿನ ಕರೆ ನೀಡಿದರು.

ಸ್ವಚ್ಛತಾ ಓಟದಲ್ಲಿ 3000ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದು, 5 ರಿಂದ 65 ವರ್ಷದವರೆಗಿನ ವಿದ್ಯಾರ್ಥಿಗಳು, ಸರ್ಕಾರಿ-ಖಾಸಗಿ ಸಂಸ್ಥೆಗಳ ಅಧಿಕಾರಿಗಳು, ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡರು.

ರಾಯಚೂರು ಇತಿಹಾಸದಲ್ಲೇ ಮೊದಲ ಬಾರಿಗೆ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಜನರು ಸ್ವಯಂಪ್ರೇರಿತವಾಗಿ ಮ್ಯಾರಥಾನ್ ಓಟದಲ್ಲಿ ಭಾಗವಹಿಸಿರುವುದು ಸುವರ್ಣ ಅಕ್ಷರಗಳಲ್ಲಿ ದಾಖಲಾದ ಸಾಧನೆಯಾಗಿದೆ.

ಈ ಸ್ವಚ್ಛತಾ ಓಟವು ಸಾರ್ವಜನಿಕರಲ್ಲಿ ಸ್ವಚ್ಛತೆಯ ಅರಿವು, ಪರಿಸರ ಸಂರಕ್ಷಣೆ, ಆರೋಗ್ಯಕರ ಜೀವನಶೈಲಿ ಮತ್ತು ಪಾಲಿಕೆಯೊಂದಿಗೆ ನಾಗರಿಕರ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸಿದೆ. ಕಾರ್ಯಕ್ರಮಕ್ಕೆ ದೊರೆತ ಅಪಾರ ಜನಬೆಂಬಲಕ್ಕೆ ಸಾರ್ವಜನಿಕರು ಸರ್ಕಾರ ಹಾಗೂ ಮಹಾನಗರ ಪಾಲಿಕೆಯ ಈ ಮಹತ್ವದ ಮುಂದಾಳತ್ವಕ್ಕೆ ಕೃತಜ್ಞತೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ವಿಶೇಷ

3ನೇ ಪುಟಕ್ಕೆ

ಗಾಯತ್ರಿ ಭವನಕ್ಕೆ ಅನುದಾನ ಮಂಜೂರಾತಿಗೆ ಸಂಸದರಿಗೆ ಮನವಿ



ರಾಯಚೂರು,ಜ.12-

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ (ರಿ), ರಾಯಚೂರು ಶಾಖೆಯ ವತಿಯಿಂದ ನಿರ್ಮಾಣಗೊಳ್ಳುತ್ತಿರುವ ಗಾಯತ್ರಿ ಭವನ ಕಟ್ಟಡಕ್ಕೆ ₹50 ಲಕ್ಷ ಅನುದಾನ ಮಂಜೂರು ಮಾಡುವಂತೆ ರಾಯಚೂರು ಸಂಸದರಿಗೆ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಇಂದು ನಗರದ ಸಂಸದರ ಕಚೇರಿಯಲ್ಲಿ ಸಲ್ಲಿಸಿದ ಮನವಿಯಲ್ಲಿ, ರಾಯಚೂರು ನಗರದಲ್ಲಿ ಮಹಾಸಭೆಯ ಅಧೀನದಲ್ಲಿ ಗಾಯತ್ರಿ ಭವನ ಎಂಬ ಸಮುದಾಯ ಭವನದ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು, ಪ್ರಸ್ತುತ ಕಟ್ಟಡವು ಮೇಲ್ಛಾವಣಿ ಹಂತವನ್ನು ತಲುಪಿದೆ ಎಂದು ತಿಳಿಸಲಾಯಿತು. ಮುಂದಿನ ಹಂತದ ಕಟ್ಟಡ ನಿರ್ಮಾಣ, ಒಳಾಂಗಣ ವ್ಯವಸ್ಥೆ ಹಾಗೂ ಅಗತ್ಯ ಸೌಲಭ್ಯಗಳ ಅಭಿವೃದ್ಧಿಗಾಗಿ ಹೆಚ್ಚಿನ ಆರ್ಥಿಕ ಸಹಾಯ ಅಗತ್ಯವಿರುವುದಾಗಿ ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಗಾಯತ್ರಿ ಭವನವು ಮುಂದಿನ

3ನೇ ಪುಟಕ್ಕೆ

ಸಿರವಾರ, ಮಾನವಿ: ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪುನಃ ಅರ್ಜಿ ಸಲ್ಲಿಸಲು ಜ.15ರವರೆಗೆ ಕಾಲಾವಕಾಶ

ರಾಯಚೂರು,ಜ.12-

ಜಿಲ್ಲೆಯ ಸಿರವಾರ, ಮಾನವಿ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರ ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶದನ್ವಯ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಿ ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ. ಅರ್ಜಿ ಸಲ್ಲಿಸುವಾಗ ವೆಬ್‌ಸೈಟ್‌ನಲ್ಲಿ ಒಟ್ಟು 4 ವಿವಿಧ ಹಂತಗಳಿದ್ದು, ಅರ್ಜಿ ಸಲ್ಲಿಸುವ 4 ಹಂತಗಳನ್ನು ಪೂರ್ಣಗೊಳಿಸದೇ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ 2026ರ ಜನವರಿ 15ರವರೆಗೆ ಅರ್ಜಿಗಳನ್ನು ಪೂರ್ಣಗೊಳಿಸಲು ಅವಕಾಶ ನೀಡಿಲಾಗಿದೆ.

ಒಂದನೇ ಹಂತ: ಆನ್‌ಲೈನ್ ತಂತ್ರಾಂಶದಲ್ಲಿ ನಿಗಧಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು, ಎರಡನೇ ಹಂತ: ತಮ್ಮ ಭಾವಚಿತ್ರ ಸಹಿಯನ್ನು ಅಪ್‌ಲೋಡ್ ಮಾಡುವುದು, ಮೂರನೇ ಹಂತ: ತಮ್ಮ ದಾಖಲಾತಿಗಳನ್ನು ಅಪ್‌ಲೋಡ್ ಮಾಡುವುದು, ನಾಲ್ಕನೇ ಹಂತ: ತಮ್ಮ ಆಧಾರ್ ಸಂಖ್ಯೆ ನಮೂದಿಸಿ, ಇ-ಹಸ್ತಾಕ್ಷರದೊಂದಿಗೆ ಅರ್ಜಿಯನ್ನು ಜನವರಿ 15 ರೊಳಗಾಗಿ ವೆಬ್‌ಸೈಟ್‌ನಲ್ಲಿ ಪೂರ್ಣಗೊಳಿಸಬೇಕು. ಆನ್‌ಲೈನ್‌ನಲ್ಲಿ ಅಪೂರ್ಣ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಸಿರವಾರ, ಮಾನವಿ ಇವರನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆಂದು ಸಿರವಾರ, ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೆಸ್ಕಾಂ ನಗರ-2: ಇಂದು ವಿದ್ಯುತ್ ವ್ಯತ್ಯಯ

ರಾಯಚೂರು,ಜ.12

ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ವ್ಯಾಪ್ತಿಯ 110ಕೆವಿ 110/11ಏಗಿ, ಎಂಯು ಎಸ್‌ಎಸ್, ಎಪಿಎಂಸಿ ಯಾರ್ಡ್ದ ಡ್ರಾಗ್‌ಹೌಸ್ ಲಿಂಕ್ ಲೈನ್ ವಿಭಜನೆ ಕಾಮುಗಾರಿಯನ್ನು ಕೈಗೊಂಡ ಪ್ರಯುಕ್ತ ಜನವರಿ 13ರ ಬೆಳಿಗ್ಗೆ 10ರಿಂದ ಸಂಜೆ 5ಗಂಟೆಯ ಅಲ್ಲಮ ಪ್ರಭು ಕಾಲೋನಿ, ಪೋತಗಲ್ ರೋಡ, ಎಲ್.ಬಿ.ಎಸ್. ನಗರ, ಅಲಿ ಕಾಲೋನಿ, ಚಂದ್ರಬಡ ರಸ್ತೆ, ಆಶ್ರಯ ಕಾಲೋನಿ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗ 'ಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ 24★7ಗ್ರಾಹಕರ

3ನೇ ಪುಟಕ್ಕೆ

ನರೇಗಾ ಯೋಜನೆ ಪುನರ್ ಸ್ಥಾಪಿಸಲು ಕಾಂಗ್ರೆಸ್ ಪಕ್ಷದಿಂದ ನಿರಂತರ ಹೋರಾಟ-ಕುಮಾರ ನಾಯಕ

ರಾಯಚೂರು,ಜ.12-

ಕೇಂದ್ರ ಸರ್ಕಾರ ನರೇಗಾ ಯೋಜನೆಯನ್ನು ಹಂತ ಹಂತವಾಗಿ ದುರ್ಬಲಗೊಳಿಸುವ ಮೂಲಕ ಗ್ರಾಮೀಣ ಜನರ ಉದ್ಯೋಗ ಹಕ್ಕನ್ನು ಕಸಿದುಕೊಳ್ಳುತ್ತಿದೆ ಎಂದು ರಾಯಚೂರು ಲೋಕಸಭಾ ಕ್ಷೇತ್ರದ ಮಾನ್ಯ ಸಂಸದರಾದ ಜಿ. ಕುಮಾರ ನಾಯಕ್ ತೀವ್ರವಾಗಿ ಆರೋಪಿಸಿದರು.

ಇಂದು ನಗರದ ಹಳೆ ಜಿಲ್ಲಾಧಿಕಾರಿ ಕಚೇರಿ ಸಮೀಪದಲ್ಲಿರುವ ತಮ್ಮ ಕಾರ್ಯಾಲಯದಲ್ಲಿ ನಡೆದ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಬಿ ಗ್ರಾಮ್ ಜಿ ಮಸೂದೆ ಅವೈಜ್ಞಾನಿಕವಾಗಿದ್ದು, ಇದು ಕೇಂದ್ರ-ರಾಜ್ಯಗಳ ನಡುವಿನ



ಅಧಿಕಾರ ಹಾಗೂ ತೆರಿಗೆ ಹಂಚಿಕೆ ಕುರಿತು ಭಾರತ ಸಂವಿಧಾನದ ವಿಧಿ 258 ಮತ್ತು 280ಗಳ ಸ್ಪಷ್ಟ ಉಲ್ಲಂಘನೆ ಎಂದು ಹೇಳಿದರು. ಸಂಸತ್ತಿನಲ್ಲಿ ವ್ಯಾಪಕ ವಿರೋಧ ವ್ಯಕ್ತವಾಗಿದ್ದರೂ ಕೂಡ, ಈ ಮಸೂದೆಯನ್ನು ಮಧ್ಯರಾತ್ರಿಯಲ್ಲಿ ಪಾಸ್ ಮಾಡಿರುವುದು ಅಪ್ರಜಾಸತ್ತಾತ್ಮಕ ನಡೆ ಎಂದು ಆಕ್ಷೇಪಿಸಿದರು.

ಇತ್ತೀಚಿನ ಪಾರ್ಲಿಮೆಂಟ್ ಚರ್ಚೆಗಳಲ್ಲಿ ಮೂಲಭೂತ ಹಕ್ಕುಗಳ ಬಗ್ಗೆ ಪ್ರಶ್ನೆ ಎತ್ತಿದವರನ್ನು ಮಾವೋವಾದಿಗಳೆಂದು ಕರೆಯಲಾಗುತ್ತಿದ್ದು, ಅದೇ ವೇಳೆ ಬಲಪಂಥೀಯ ಕಾರ್ಪೊರೇಟ್ ಶಕ್ತಿಗಳಿಗೆ ಸಾವಿರಾರು ಕೋಟಿ ರೂಪಾಯಿ ಸಬ್ಸಿಡಿ ನೀಡಲಾಗುತ್ತಿದೆ ಎಂದು ಕೇಂದ್ರ ಸರ್ಕಾರದ ನೀತಿಯನ್ನು ಕಟುವಾಗಿ ಟೀಕಿಸಿದರು.

ನಾವು ಬಡವರ, ದೀನ ದಲಿತರ ಪರವಾಗಿ ಮಾತನಾಡಿದರೆ ಎಡ ಪಂಥೀಯರು, ನಕ್ಸಲರು ಎನ್ನುತ್ತಾರೆ. ಹಾಗಾದರೆ ಬಲಪಂಥದ ಪರವಾಗಿ ಮಾತನಾಡುವುದು ದೇಶಭಕ್ತಿಯೇ? ಎಂದು ಪ್ರಶ್ನಿಸಿದರು.

ರಾಮು ನಮ್ಮ ಎದೆಯೊಳಗಿದ್ದಾನೆ, ತುಟ್ಟಿಯಲ್ಲಿ ಅಲ್ಲ ಎಂದು ಹೇಳಿದ ಅವರು, ಧಾರ್ಮಿಕ ಭಾವನೆಗಳನ್ನು ರಾಜಕೀಯ ಲಾಭಕ್ಕಾಗಿ ಬಳಸುವ ಪ್ರವೃತ್ತಿಯನ್ನು ಖಂಡಿಸಿದರು. ಯೋಜನೆಯ ಹೆಸರಿನಲ್ಲಿ ರಾಮನ ಹೆಸರು ಇದೆ ಎಂಬ ಕಾರಣಕ್ಕೆ ನಾವು ವಿರೋಧಿಸುತ್ತಿಲ್ಲ, ಆದರೆ ಕೇಂದ್ರ ಸರ್ಕಾರದ ಜನವಿರೋಧಿ ಹಾಗೂ ಕುಟಿಲ ನೀತಿಗಳಿಗೆ ನಮ್ಮ ವಿರೋಧ ಸ್ಪಷ್ಟ ಎಂದು ಹೇಳಿದರು.

ವಿಬಿ ಗ್ರಾಮ್ ಜಿ ಯೋಜನೆಯಿಂದ ಗ್ರಾಮೀಣ ಸಮಾಜಕ್ಕೆ ಗಂಭೀರ ದುಷ್ಪರಿಣಾಮಗಳು ಉಂಟಾಗಲಿದ್ದು, ನಿರುದ್ಯೋಗದ ಪ್ರಮಾಣ ಹೆಚ್ಚಳ ಮಹಿಳೆಯರ ಉದ್ಯೋಗಾವಕಾಶಗಳಲ್ಲಿ ಗಣನೀಯ ಕುಸಿತ ಪಂಚಾಯತಿಗಳ ಅಧಿಕಾರ ಮೊಟಕು ಕನಿಷ್ಠ ವೇತನ

3ನೇ ಪುಟಕ್ಕೆ

ಹಾಲುಮತ ಸಂಸ್ಕೃತಿ ವೈಭವ ಕಾರ್ಯಕ್ರಮ ಯಶಸ್ವಿಗೆ ವಿರುಪಾಕ್ಷಿಗೌಡ ಮನವಿ

ಸಿರವಾರ,ಜ.12-

ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ತಿಂಥಿಣಿ ಬಿಡ್ಜ್ ಕನಕ ಗುರು ಪೀಠದ ಆವರಣದಲ್ಲಿ ಜನವರಿ 12, 13, 14, ರಂದು ಹಾಲುಮತ ಸಂಸ್ಕೃತ ವೈಭವ ಕಾರ್ಯಕ್ರಮ ನೆಡೆಯಲಿದೆ ಎಂದು ತಿಂಥಿಣಿ ಬಿಡ್ಜ್ ಕನಕ ಗುರು ಪೀಠದ ಶ್ರೀ ಸಿದ್ದರಾಮನಂದ ಪುರಿ ಮಹಾ ಸ್ವಾಮಿಗಳು ತಿಳಿಸಿದ್ದು ಈ ಕಾರ್ಯಕ್ರಮ ಯಶಸ್ವಿವಿಗೆ ರಾಯಚೂರು ಜಿಲ್ಲಾ ಕುರುಬರ ಸಂಘದ ಮಾಧ್ಯಮ ಸಂಚಾಲಕರು ಹಾಗೂ ಕರ್ನಾಟಕ ಪತ್ರಕರ್ತರ ಸಂಘದ ಸಿರವಾರ ತಾಲೂಕ ಅಧ್ಯಕ್ಷರು ಶ್ರೀ ಬೀರಲಿಂಗೇಶ್ವರ ಎಜುಕೇಶನ್ ಟ್ರಸ್ಟ್ ಅಧ್ಯಕ್ಷರು ವಿರುಪಾಕ್ಷಗೌಡ ಮರಾಟ ಅವರು



ಮನವಿ ಮಾಡಿದ್ದಾರೆ.

ಹಾಲುಮತ ಸಂಸ್ಕೃತ ವೈಭವ 2021 ಕಾರ್ಯಕ್ರಮ ನಿಮಿತ್ಯ 108 ಪಟ್ಟದ ಪೂಜಾರಿಗಳು, 108 ಗೊರವರು, 108. ಈರಕಾರರು, 108 ವಾರುಗಳು,108. ಡೊಳ್ಳುಗಳೊಂದಿಗೆ ಪಲ್ಲಕ್ಕಿಯ ಪೂಜೆ ಹಾಗೂ ಸುಡುಗಾಡು ಸಿದ್ದರು, ಟಗರು,ಜೋಗಿಗಳು,ಹೇಳವರ, ಸಮಾವೇಶ

3ನೇ ಪುಟಕ್ಕೆ

ಯಶಸ್ವಿನಿ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಡಿ ನೋಂದಣಿ ಪ್ರಕ್ರಿಯೆ ಆರಂಭ

ರಾಯಚೂರು,ಜ.12-

ಇಲ್ಲಿನ ಸಹಕಾರ ಸಂಘಗಳ ಉಪ ನಿಬಂಧಕರವರ ಕಾರ್ಯಾಲಯದಿಂದ 2025-26ನೇ ಸಾಲಿನ ಯಶಸ್ವಿನಿ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಡಿ ನೋಂದಾಯಿಸುವ ಪ್ರಕ್ರಿಯೆ ಆರಂಭವಾಗಿದೆ.

ಯಶಸ್ವಿನಿ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಾಗಿದ್ದು, ಈ ಯೋಜನೆಯಡಿ ನೋಂದಾಯಿಸಲು ಸರ್ಕಾರವು ಆದೇಶ ಹೊರಡಿಸಿದ್ದು, ಅದರನ್ವಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಪಿಕಾರ್ಡ ಬ್ಯಾಂಕಗಳ, ಹಾಲು ಉತ್ಪಾದಕರ ಸಹಕಾರ ಸಂಘಗಳ, ಟಿ.ಎ.ಪಿ.ಸಿ. ಎಮ್.ಎಸ್‌ಗಳ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರಡಿ ಅಥವಾ ಕರ್ನಾಟಕ ಸೌಹಾರ್ದ ಸಹಕಾರಿಗಳ ಕಾಯ್ದೆ 1997ರಡಿ ಅಥವಾ ಬಹು ರಾಜ್ಯ ಸಹಕಾರಿ ಸಂಘಗಳ ಕಾಯ್ದೆ 2002ರಡಿ ನೋಂದಾಯಿಸಿ, ಕಾರ್ಯನಿರ್ವಹಿಸುತ್ತಿರುವ ಯಾವುದೇ ಸಹಕಾರ ಸಂಘಗಳ ಸದಸ್ಯರು ಮತ್ತು ಗ್ರಾಮೀಣ ಸಹಕಾರ ಸಂಘಗಳ/ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಮತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವತಿಯಿಂದ ಸಂಘಟಿಸಲ್ಪಟ್ಟಿರುವ ಸ್ವಸಹಾಯ ಗುಂಪುಗಳ ಸದಸ್ಯರುಗಳು ಗರಿಷ್ಟ ನಾಲ್ಕು ಸದಸ್ಯರ ಕುಟುಂಬಕ್ಕೆ ವಾರ್ಷಿಕ ವಂತಿಗೆ 500ರೂ.ಗಳು ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಹೆಚ್ಚುವರಿ ಸದಸ್ಯರಿಗೆ 100ರೂ.ಗಳನ್ನು ಪಾವತಿಸಿ ನೋಂದಾಯಿಸಬಹುದು ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸದಸ್ಯರಿಗೆ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ ಸಹಾಯಧನ ನೀಡುವ ಮೂಲಕ ಅವರ ವಾರ್ಷಿಕ ಸದಸ್ಯತ್ವದ ವಂತಿಗೆಯನ್ನು ಸರ್ಕಾರವೇ ಭರಿಸುತ್ತದೆ.

ಅದೇ ರೀತಿ ನಗರ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಡಿ ನೋಂದಾಯಿಸಲು ಈ ಯೋಜನೆಯಡಿ ಗರಿಷ್ಟ ನಾಲ್ಕು ಸದಸ್ಯರ ಕುಟುಂಬಕ್ಕೆ ವಾರ್ಷಿಕ ವಂತಿಗೆ ರೂ.1000/- ರಂತೆ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಹೆಚ್ಚುವರಿ ಸದಸ್ಯರಿಗೆ ರೂ.200/-ಗಳನ್ನು ಪಾವತಿಸಿ ನೋಂದಾಯಿಸಬಹುದು.

ನವಜಾತ ಶಿಶು ತಾಯಿ ಹೆಸರು ಇರುವ ಯಶಸ್ವಿನಿ ಕಾರ್ಡ್ನ ಆಧಾರದ ಮೇಲೆ ಈ ಯೋಜನೆಯಡಿಯಲ್ಲಿ ಸೌಲಭ್ಯವನ್ನು ಮುಂದಿನ ವರ್ಷ ನೋಂದಾಣಿಯಾಗುವವರೆವಿಗೆ ಪಡೆಯಬಹುದು. ನಂತರದಲ್ಲಿ ಮಗುವಿನ ಹೆಸರನ್ನು ನೋಂದಾಯಿಸಿಕೊಡು ಯೋಜನೆಯ ಸೌಲಭ್ಯ ಪಡೆಯಬಹುದು.

ಯಶಸ್ವಿನಿ ಯೋಜನೆಯಡಿ ಸದಸ್ಯರಾಗಲು ಸಹಕಾರ ಸಂಘಗಳಲ್ಲಿ ಸದಸ್ಯರಾಗಿ ಯಶಸ್ವಿನಿ ಯೋಜನೆಯಡಿ ನೋಂದಾಯಿಸುವ ದಿನಾಂಕಕ್ಕೆ ಕನಿಷ್ಠ 3 ತಿಂಗಳು ಕಳೆದಿರಬೇಕು. ಹಾಗೂ ವಯೋಮಿತಿಯ ನಿರ್ಬಂಧವಿರುವುದಿಲ್ಲ.

ಈ ಯೋಜನೆಯಡಿ ಯಶಸ್ವಿನಿ ಸದಸ್ಯರುಗಳನ್ನು ನೋಂದಾಯಿಸುವ/ನೋದಣಿ ಪ್ರಕ್ರಿಯೆಯನ್ನು ದಿನಾಂಕ:03-01-2026 ರಿಂದ ಪ್ರಾರಂಭವಾಗಿರುವುದರಿದ ಸದರಿ ಯೋಜನೆಯಡಿ ಸರಿ ಸುಮಾರು 1650 ಖಾಯಿಲೆಗಳಿಗೆ ಚಿಕಿತ್ಸೆ ಗಳು ಮತ್ತು 478 ಐ.ಸಿ.ಯು ಚಿಕಿತ್ಸೆ ಗಳು ಒಟ್ಟು 2128

3ನೇ ಪುಟಕ್ಕೆ

ರಾಯಚೂರು ಮಹಾನಗರ ಪಾಲಿಕೆಯಿಂದ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಡಿ ಅರ್ಜಿ ಆಹ್ವಾನ

ರಾಯಚೂರು ಜನವರಿ 12 (ಕರ್ನಾಟಕ ವಾರ್ತೆ): ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2019-20 ಹಾಗೂ 2024-25ನೇ ಸಾಲಿನ ಎಸ್.ಎಫ್.ಸಿ ನಿಧಿಯ ಶೇ.5ರ ಪರಿಷ್ಕೃತ ಕ್ರಿಯಾ ಯೋಜನೆಯಡಿ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಡಿ ಪಾಲಿಕೆ ವ್ಯಾಪ್ತಿ ಪ್ರದೇಶದಲ್ಲಿ ಬರುವ ಅರ್ಹ ಫಲಾನುಭವಿಗಳಿಗೆ ವಿವಿಧ ಸೌಲಭ್ಯ ಒದಗಿಸಲು ಅರ್ಜಿ ಆಹ್ವಾನಿಸಲಾಗಿದೆ.

2019-20 ಸಾಲಿನ ಶೇ.5ರಡಿ ಪರಿಶಿಷ್ಟ ಜಾತಿಯ ವಿಕಲಚೇತನರ ಮನೆಯ ಮೇಲ್ಛಾವಣೆ ದುರಸ್ಥಿಗಾಗಿ 2ಲಕ್ಷ ರೂ.ಗಳು ಹಾಗೂ 2024-25ನೇ ಸಾಲಿನ ಶೇ.5ರಡಿ ಪರಿಶಿಷ್ಟ ಜಾತಿಯ ವಿಕಲಚೇತನರ ಮನೆಯ ಮೇಲ್ಛಾವಣೆ ದುರಸ್ಥಿಗಾಗಿ 1.15ಲಕ್ಷ ರೂ.ಗಳನ್ನು ಕಾಯ್ದಿಸಲಾಗಿದೆ.

ದಾಖಲಾತಿಗಳು: ನಿಗದಿತ ನಮೂನೆಯಲ್ಲಿ ಅರ್ಜಿ, ದೃಢೀಕೃತ ಜಾತಿ ಮತ್ತು ಆದಾಯ ಪ್ರಮಾಣ ಪತ್ರ (ಪ್ರಸಕ್ತ ಚಾಲ್ತಿ ಸಾಲು), ದೃಢೀಕೃತ ವಾಸಸ್ಥಳಕ್ಕೆ ಗುರುತಿನ ಚೀಟಿ/ರೇಷನ್ ಕಾರ್ಡ್, ಪಾಸ್ ಫೋಟೋ ಅಳತೆಯ 2 ಭಾವ ಚಿತ್ರ, ಬ್ಯಾಂಕ್ ಪಾಸ್ ಪುಸ್ತಕ್ ಹಾಗೂ ಐ.ಎಫ್.ಎಸ್.ಸಿ ಕೋಡ್‌ನೊಂದಿಗೆ ಬ್ಯಾಂಕ್ ವಿವರ, ವೈದ್ಯರಿಂದ ಪಡೆದ ಗುರುತಿನ ಚೀಟಿ/ಯು.ಡಿ.ಎ. ಕಾರ್ಡ್, ವಿಕಲಚೇತನರ 1 ಭಾವಚಿತ್ರ, ಮನೆಯ ದುರಸ್ಥಿ ಮೇಲ್ಛಾವಣೆ ಛಾಯಾಚಿತ್ರ ಹಾಗೂ ಮೊಬೈಲ್ ನಂಬರ್‌ನೊದಿಗೆ ಜನವರಿ 17ರೊಳಗಾಗಿ ಸಲ್ಲಿಸಬಹುದಾಗಿದೆ. ಅವದಿ ಮೀರಿ ಬಂದ ಅರ್ಜಿಗಳನ್ನು

3ನೇ ಪುಟಕ್ಕೆ

ಸತ್ಕಾರ್ಯಗಳ ನೆನಹು ಶಾಶ್ವತ : ಶ್ರೀ ರಂಭಾಪುರಿ ಜಗದ್ಗುರುಗಳು



ನಂಜನಗೂಡು,ಜ.12-

ಮಾನವ ಜೀವನ ಶಾಶ್ವತವಲ್ಲ. ಮಾಡಿದ ಸತ್ಕಾರ್ಯಗಳ ನೆನಹು ಶಾಶ್ವತವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯ ಪಟ್ಟರು.

ಅವರು ಭಾನುವಾರ ನಗರದ ಹೊನ್ನಲಗೆರೆ ಮಠದ ಲಿಂ. ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳವರ 25ನೇ ಪುಣ್ಯ ಸ್ಮರಣೋತ್ಸವದ ಅಂಗವಾಗಿ ಮಠದ ಆವರಣದಲ್ಲಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜನ್ಮ ಜನ್ಮಗಳ ಪುಣ್ಯ ಫಲದಿಂದ ಮಾನವ ಜೀವನ ಪ್ರಾಪ್ತವಾಗಿದೆ. ಅರಿವು ಆದರ್ಶಗಳಿಂದ ಮನುಷ್ಯನ ಬದುಕು ಸಮೃದ್ಧಗೊಳ್ಳಬೇಕು. ಹುಟ್ಟು ಮನುಷ್ಯನಿಗೆ ಎಷ್ಟು ಸಹಜವೋ ಹುಟ್ಟಿದ ಮನುಷ್ಯನಿಗೆ ಮರಣ ನಿಶ್ಚಿತ. ಹುಟ್ಟು ಸಾವುಗಳ ಮಧ್ಯದ ಬದುಕು ಸಾರ್ಥಕ ಪಡಿಸಿಕೊಳ್ಳಬೇಕಾದುದು ಅವರವರ ಜವಾಬ್ದಾರಿಯಾಗಿದೆ. ಹುಟ್ಟುವಾಗ ಉಸಿರು ಇರುತ್ತದೆ. ಆದರೆ ಹೆಸರು ಇರುವುದಿಲ್ಲ. ಮನುಷ್ಯ ಅಗಲಿದಾಗ ಉಸಿರು ಇರುವುದಿಲ್ಲ. ಆದರೆ ಹೆಸರು ಉಳಿಯುವಂತೆ ಬದುಕುವುದೇ ನಿಜವಾದ ಬದುಕು ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಲಿಂ. ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ವೀರಶೈವ ಧರ್ಮದ ಆದರ್ಶಗಳನ್ನು ಪರಿಪಾಲಿಸಿ ಭಕ್ತ ಸಮುದಾಯಕ್ಕೆ ಉತ್ತಮ ಸಂಸ್ಕಾರ ಸದ್ವಿಚಾರಗಳನ್ನು ಬೋಧಿಸಿದ ಶ್ರೇಯಸ್ಸು ಅವರದು. ಅವರು ಮಾಡಿದ ಪೂಜಾ ಫಲ, ಆಚರಿಸಿಕೊಂಡು ಬಂದ ನೀತಿ ಸಂಹಿತೆ ಮತ್ತು ಬೋಧಿಸಿದ ಸಂದೇಶಗಳು ಜನಮನದಲ್ಲಿ ಅವಿಸ್ಮರಣೀ ಯವಾ ಗಿವೆ. ಇಂದಿನ ಪಟ್ಟಾಧ್ಯಕ್ಷರಾದ ಶಿವಮೂರ್ತಿ ಶಿವಾಚಾರ್ಯರು ವಿದ್ಯಾ ವಿನಯ ಸಂಪನ್ನರಾಗಿ ಮಠದ ಧಾರ್ಮಿಕ ಕಾರ್ಯಗಳನ್ನು ಅದ್ದೂ ರಿಯಾಗಿ ನೆರವೇರಿಸಿಕೊಂಡು ಬರುತ್ತಿರುವುದು ತಮಗೆ ಹರುಷ ತಂದಿದೆ ಎಂದು ಶ್ಲಾಘಿಸಿ ಶ್ರೀಗಳಿಗೆ ರೇಶ್ಮೆ ಮಡಿ ಸ್ಮರಣಿಕೆ ಫಲ ಪುಷ್ಪವಿತ್ತು ಶುಭ ಹಾರೈಸಿದರು.

ನೇತೃತ್ವ ವಹಿಸಿದ ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಬಹಳ ವರುಷಗಳ ಹಿಂದೆ ಲಿಂ. ಶ್ರೀ ರಂಭಾಪುರಿ ವೀರಗಂಗಾ ಧರ ಜಗದ್ಗುರುಗಳು ಆಗಮಿಸಿ ಆಶೀರ್ವಾದ ಮಾಡಿದ್ದರು. ಇಂದು ಶ್ರೀ ರಂಭಾಪುರಿ ಪೀಠವನ್ನು ಆರೋಹಣ ಮಾಡಿದ ಡಾ.ವೀರ ಸೋಮೇಶ್ವರ ಜಗದ್ಗುರುಗಳು ಆಗಮಿಸಿರುವುದು ಭಕ್ತ ಸಮು ದಾಯಕ್ಕೆ ಅಪಾರ ಹರುಷ ತಂದಿದೆ. ಶ್ರೀ ರಂಭಾಪುರಿ ಪೀಠದ ಶಾಖಾ ಮಠವೇ ಆಗಿರುವುದರಿಂದ ಈ ಭಾಗದಲ್ಲಿ ಶ್ರೀ ರಂಭಾಪುರಿ ಜಗದ್ಗು ರುಗಳು ಮೇಲಿಂದ ಮೇಲೆ ದಯ ಮಾಡಿಸಬೇಕೆಂಬುದು ಭಕ್ತರೆಲ್ಲರ ಅಪೇಕ್ಷೆಯಾಗಿದೆ. ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರ ತತ್ವ ಸಿದ್ಧಾಂತಗಳು ಮತ್ತು ಶರಣರ ಸಾಮಾಜಿಕ ಚಿಂತನಗಳು ಬದುಕಿ ಬಾಳುವ ಜನಾಂಗಕ್ಕೆ ದಾರಿದೀಪ ವಾಗಿವೆ ಎಂದರು. ಮುಡುಕುತೊರೆ ಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ಧನಗೂರು ಷಡಕ್ಷರ ಶಿವಾಚಾರ್ಯರು, ಕಲ್ಲುಬಾಳು ಮಠದ ಶಿವಾನಂದ ಶಿವಾಚಾರ್ಯರು, ವಾಟಾಳು ಸಿದ್ಧಲಿಂಗ ಶಿವಾಚಾರ್ಯರು, ಮೈಸೂರು ಡಾ.ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯರು, ಹೊನ್ನಲಗೆರೆ ಶಿವಲಿಂಗ ಶಿವಾಚಾರ್ಯರು, ಗುರುವಿನಪುರ ಜಗದೀಶ ಶಿವಾಚಾರ್ಯರು, ಅಜ್ಜೀಪುರದ ನಂದೀಶ ಶಿವಾಚಾರ್ಯರು, ತೆಂಡೇಕೆರೆ ಗಂಗಾಧರ ಶಿವಾಚಾರ್ಯರು ಮೊದಲ್ಗೊಂಡು ಸುಮಾರು 25 ಜನ ಶ್ರೀಗಳು ಸಮಾರಂಭದಲ್ಲಿ ಪಾಲ್ಗೊಂ ಡು ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

ನಂಜನಗೂಡು ಶಾಸಕ ದರ್ಶನ್ ಧ್ರುವನಾರಾಯಣ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಗುಂಡ್ಲುಪೇಟೆ ಶಾಸಕ ಹೆಚ್.ಎಂ.ಗಣೇಶ ಪ್ರಸಾದ್, ಬಿಜೆಪಿ ಮುಖಂಡ ಎಸ್.ಮಹದೇವಯ್ಯ, ಅ.ಭಾ.ವೀ.ಮ.ಸಭಾ ಅಧ್ಯಕ್ಷ ಎಸ್.ಎಂ.ಕೆಂಪಣ್ಣ, ಮಾಜಿ ಅಧ್ಯಕ್ಷ ದೇವನೂರು ಮಹದೇವಪ್ಪ, ಕಾಂಗ್ರೆಸ್ ಅಧ್ಯಕ್ಷ ಕುರಹಟ್ಟಿ ಮಹೇಶ್, ಪುಸಭಾ ಮಾಜಿ ಅಧ್ಯಕ್ಷ ಆರ್.ವಿ.ಮಹದೇವಸ್ವಾಮಿ, ಹೆಚ್.ಡಿ.ಕೋಟೆ ತಾ.ಪಂ.ಮಾಜಿ ಅಧ್ಯಕ್ಷ ಸಿ.ಕೆ.ಗಿರೀಶ್, ಹಲಗೂರಿನ ಪಾಲಾಕ್ಷ ಮೂರ್ತಿ ಭಾಗವಹಿಸಿ ಶ್ರೀ ರಂಭಾಪುರಿ ಜಗದ್ಗುರುಗಳಿಂದ ಆಶೀರ್ವಾದ ಪಡೆದರು.

ಸಮಾರಂಭಕ್ಕೂ ಮುನ್ನ ನಗರದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಭವ್ಯ ಸಾರೋಟ ಮೆರವಣಿಗೆ ಜರುಗಿತು. ಪ್ರಾತ:ಕಾಲ ಮಠದ ಆವರಣದಲ್ಲಿ ಆತ್ಮಬಲ ಗುರುಬಲ ಸಂವರ್ಧನೆಗಾಗಿ-ಶಾಂತಿ ನೆಮ್ಮದಿಗಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಭಕ್ತ ಸಂಕುಲಕ್ಕೆ ಶುಭ ಹಾರೈಸಿದರು. ನಂತರ ಬಂದ ಎಲ್ಲ ಭಕ್ತ ಬಾಂಧವರಿಗೆ ಅನ್ನ ದಾಸೋಹ ನೆರವೇರಿತು.

ಸಿಎಂ ಆಗಮನ ಹಿನ್ನೆಲೆ: ಕಾರ್ಯಕ್ರಮ ಯಶಸ್ಸಿಗೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ -ಪ್ರಿಯಾಂಕ್ ಖರ್ಗೆ



ಕಲಬುರಗಿ,ಜ.12-

ಜನವರಿ 12 ರಂದು ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಪ್ರಜಾ ಸೌಧ ನಿರ್ಮಾಣಕ್ಕೆ ಅಡಿಗಲ್ಲು ಸೇರಿದಂತೆ ಯಡ್ರಾಮಿ ಮತ್ತು ಸೇಡಂ ಪ್ರತ್ಯೇಕ ಕಾರ್ಯಕ್ರಮದಲ್ಲಿ ಭಾಗವಹಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆ ವಿಪಕ್ಷ ನಾಯಕ ಡಾ.ಮಲ್ಲಿ ಕಾರ್ಜುನ ಖರ್ಗೆ, ಡಿ.ಸಿ.ಎಂ ಡಿ.ಕೆ. ಶಿವಕುಮಾರ ಅವರುಗಳು ಆಗಮಿಸುತ್ತಿದ್ದು, ಕಾರ್ಯಕ್ರಮ ಯಶಸ್ಸಿಗೆ ಜಿಲ್ಲೆಯ ಎಲ್ಲಾ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ರಾಜ್ಯದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ ನೀಡಿದರು.

ಶನಿವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು, ಸೋಮವಾರ ಮೊದಲು ಯಡ್ರಾಮಿ ನಂತರ ಸೇಡಂ ನಲ್ಲಿ ಕಾರ್ಯಕ್ರಮ ನಡೆಯಲಿದೆ. ಇದರಲ್ಲಿ ಜಿಲ್ಲೆಯ ಸುಮಾರು 1,595 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾ ಗುತ್ತಿದೆ. ಇದೊಂದು ಐತಿಹಾಸಿಕ ಕಾರ್ಯಕ್ರಮವಾಗಿದೆ ಎಂದರು.

ಕಂದಾಯ ಸಚಿವ ಕೃಷ್ಣ ಬೈರೇಗೌಡ, ಶಿಕ್ಷಣ ಸಚಿವ ಎಸ್.ಮಧು ಬಂಗಾರಪ್ಪ ಸೇರಿದಂತೆ ಪ್ರದೇಶದ ಸಚಿವರು, ಚುನಾಯಿತ ಜನಪ್ರತಿನಿಧಿಗಳು ಸಹ ಆಗಮಿಸಲಿರುವ ಹಿನ್ನೆಲೆ ಯಲ್ಲಿ ಗಣ್ಯರ ಶಿಷ್ಟಾಚಾರದಲ್ಲಿ ಯಾವುದೇ ಲೋಪವಾಗದಂತೆ ಎಚ್ಚರ ವಹಿಸಬೇಕು. ಅಧಿಕಾರಿಗಳಿಗೆ ನೀಡಲಾದ ಜವಾಬ್ದಾರಿಯನ್ನು ಅರಿತು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು.

ಎರಡು ಕಾರ್ಯಕ್ರಮಕ್ಕೆ ಆಯಾ ತಾಲೂಕಿನ ಗ್ರಾಮಗಳಿಂದ ಸಾವಿರಾರು ಸಂಖ್ಯೆಯಲ್ಲಿ ಜನ ಅಗಮಿಸುವ ನಿರೀಕ್ಷೆ ಇರುವುದರಿಂದ ಬಸ್ ವ್ಯವಸ್ಥೆ ಮಾಡಬೇಕು ಎಂದು ಕೆ.ಕೆ.ಅರ್.ಟಿ.ಸಿ. ವ್ಯವಸ್ಥಾಪಕ ನಿರ್ದೇಶಕಿ ಡಾ.ಬಿ.ಸುಶೀಲಾ ಅವರಿಗೆ ನಿರ್ದೇಶನ ನೀಡಿದ ಸಚಿವರು, ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ, ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಸಮರ್ಪಕವಾಗಿ ಮಾಡ ಬೇಕು. ಜನಸಂದಣಿಯಾಗದಂತೆ ಸುಗಮ ಸಂಚಾರದ ನಿರ್ವಹಣೆ ಮಾಡಬೇಕು.

ತುರ್ತು ಚಿಕಿತ್ಸೆಗೆ ಅಂಬುಲೆನ್ಸ್ ತೈನಾತಿಸಬೇಕು. ಎಲ್ಲೆಡೆ ಸೂಕ್ತ ಪೊಲೀಸ್ ಭದ್ರತೆ ನಿಯೋಜಿಸಬೇಕು. ಅಗತ್ಯವುದಲ್ಲಿ ಬೇರೆ ಜಿಲ್ಲೆಯಿಂದ ಭದ್ರತೆಗೆ ಹೆಚ್ಚಿನ ಸಿಬ್ಬಂದಿಯನ್ನು ನಿಯೋಜಿಸಬೇಕು ಎಂದರು.

ಊಟಕ್ಕೆ ಹೆಚ್ಚಿನ ಕೌಂಟರ್ ಸ್ಥಾಪಿಸಿ: ಕಾರ್ಯಕ್ರಮಕ್ಕೆ ಸಾವಿರಾರು ಸಂಖ್ಯೆಯಲ್ಲಿ ಸಾರ್ವಜನಿಕರು, ಮಹಿಳೆಯರು ಆಗಮಿಸುವುದರಿಂದ ಯಡ್ರಾಮಿ ಮತ್ತು ಸೇಡಂ ಎರಡು ಕಡೆ ಊಟದ ಸ್ಥಳದಲ್ಲಿ ಸ್ವಚ್ಛತೆ ಕಾಪಾಡಬೇಕು. ಜನಸ್ತೋ ಮಕ್ಕ ನುಗುಣವಾಗಿ ಊಟದ ಕೌಂಟರ್ ಹೆಚ್ಚಿಸಬೇಕು. ಯಾವುದೇ ಗೊಂದ ಲಕ್ಕೆ ಅವಕಾಶ ನೀಡಬಾರದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಸೂಚಿಸಿ ದರು.

ಸಭೆಯಲ್ಲಿ ಕರ್ನಾಟಕ ರೇಷ್ಮೆ ಉದ್ಯಮಗಳ ನಿಯಮಿತದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಕ್ಷೇತ್ರದ ಶಾಸಕಿ ಕನೀಜ್ ಫಾತಿಮಾ, ಕಲಬುರಗಿ ದಕ್ಷಿಣ ಶಾಸಕ ಅಲ್ಲಮ ಪ್ರಭು ಪಾಟೀಲ, ಎಂ.ಎಲ್.ಸಿ ಜಗದೇವ ಗುತ್ತೇದಾರ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಐ.ಜಿ.ಪಿ ಶಾಂತನು ಸಿನ್ಹಾ, ಕೆ.ಕೆ.ಆರ್.ಟಿ.ಸಿ. ಎಂ.ಡಿ ಡಾ.ಬಿ.ಸುಶೀಲಾ, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ. ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಅಯುಕ್ತರಾದ ಸಾಹಿತ್ಯ, ಪ್ರಭುರೆಡ್ಡಿ ಸೇರಿದಂತೆ ಅನೇಕ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.



ವಿಜೃಂಭಣೆಯಿಂದ ಜರುಗಿದ ಉಟಕನೂರು ಅಡವಿ ಸಿದ್ದೇಶ್ವರ ಜಾತ್ರೆ

ಕವಿತಾಳ,ಜ.12-

ಸಮೀಪದ ಉಟಕನೂರು ಗ್ರಾಮದ ಅಡವಿ ಸಿದ್ದೇಶ್ವರ ಮಠದ ಜಾತ್ರೆ ಪ್ರಯುಕ್ತ ರವಿವಾರ ರಥೋತ್ಸವ ಸಡಗರ ಸಂಭ್ರಮದಿಂದ ಜರುಗಿತು.

ಬಸವಲಿಂಗ ದೇಶೀಕೇಂದ್ರ ಮಹಾ ಶಿವಯೋಗಿಗಳ 161ನೇ ಹಾಗೂ ಮರಿಬಸವಲಿಂಗ ದೇಶೀಕೇಂದ್ರ ಸ್ವಾಮೀಜಿಯ 35ನೇ ಪುಣ್ಯ ಸ್ಮರಣೆ ಅಂಗವಾಗಿ ಕತೃ ಗದ್ದುಗೆಗೆ ಮಹಾ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಮಹಾ ಮಂಗಳಾರತಿ ಸೇರಿದಂತೆ ವಿಶೇಷ ಪೂಜೆ, ನೂತನ ರಥೋತ್ಸವದ ಕಳಸಾರೋಹಣ, ಜಂಗಮ ಗಣಾರಾಧನೆ, ದಾಸೋಹ, ಮತ್ತು ಪಲ್ಲಕ್ಕಿ ಉತ್ಸವ ವಿಜೃಂಭಣೆಯಿಂದ ಜರುಗಿತು.

ಅಗಣಿತ ಲೀಲಾ ಮೂರ್ತಿ ಗ್ರಂಥ ಮತ್ತು ಸ್ವಾಮೀಜಿಗಳ ಭಾವ ಚಿತ್ರವನ್ನು ಅಂಬಾರಿಯಲ್ಲಿ ಮೆರವಣಿಗೆ ಮಾಡಲಾಯಿತು, ಬೆಳಿಗ್ಗೆ 10 ಗಂಟೆಗೆ ಮಹಿಳೆಯರಿಂದ ಹೂವಿನ ರಥೋತ್ಸವ ಹಾಗೂ ಸಂಜೆ ನೂತನ ಮಹಾ ರಥೋತ್ಸವ ನೆರವೇರಿತು.

ರಥೋತ್ಸವದಲ್ಲಿ ಪಾಲ್ಗೊಂಡ ಸಹಸ್ರಾರು ಭಕ್ತರು ಕಾಯಿ, ಕರ್ಪೂರ, ನೈವೇದ್ಯ ಸಮರ್ಪಿಸಿದರು. ರಥಕ್ಕೆ ಉತ್ತತ್ತಿ, ಬಾಳೆಹಣ್ಣು ಎಸೆದು ಭಕ್ತಿ ಮೆರೆದರು.

ಜಿಲ್ಲೆಯ 20 ಗ್ರಾಮದಲ್ಲಿ ಸ್ಪಂದನ ಗ್ರಾಮ ಹಿರಿಯರ ಕೇಂದ್ರ, ಲಾಂಛನ ಬಿಡುಗಡೆ ಮಾಡಿದ ಸಚಿವ ಪ್ರಿಯಾಂಕ್ ಖರ್ಗೆ



ಕಲಬುರಗಿ,ಜ.12-

ಗ್ರಾಮೀಣ ಭಾಗದಲ್ಲಿ ಹಿರಿಯ ನಾಗರಿಕರಲ್ಲಿ ಸಾಮಾನ್ಯವಾಗಿ ಕಂಡು ಬರುವ ನಿರ್ಲಕ್ಷ್ಯತೆ ಮತ್ತು ಪ್ರತ್ಯೇಕತೆಯ ಭಾವನೆ ಉಂಟಾಗದಂತೆ ಅವರನ್ನು ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಅವರ ದೇಹ ಮತ್ತು ಮನಸ್ಸನ್ನು ಸಕ್ರಿಯವಾಗಿಡುವ ಉದ್ದೇಶದಿಂದ ಕಲಬುರಗಿಯಲ್ಲಿ ಪ್ರಾಯೋಗಿಕವಾಗಿ ತೆರೆಯ ಲಾಗುತ್ತಿರುವ ಸ್ಪಂದನ ಗ್ರಾಮ ಹಿರಿಯರ ಕೇಂದ್ರದ ಲಾಂಛನವನ್ನು ರಾಜ್ಯದ ಗ್ರಾಮೀ ಣಾಭಿವೃದ್ಧಿ ಹಾಗೂ ಪಂಚಾಯತ ರಾಜ್, ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತು ವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಬಿಡುಗಡೆ ಮಾಡಿದರು. ರವಿವಾರ ಕಲಬುರಗಿ ನಗರದ ವಾಜಪೇಯಿ ಬಡಾಣೆಯ ಪ್ರಬುದ್ಧ ಅಕಾಡೆಮಿ ಉದ್ಘಾಟನೆ ಕಾರ್ಯಕ್ರ ಮದಲ್ಲಿ ಸ್ಪಂದನ ಕೇಂದ್ರದ ಪೋಸ್ಟರ್ ಅನಾವರಣ ಮಾಡಿದರು.

ವಲಸೆ ಮತ್ತು ಹೆಚ್ಚುತ್ತಿರುವ ವಿಭಕ್ತ ಕುಟುಂಬಗಳ ವ್ಯವಸ್ಥೆ ಹಾಗೂ ಡಿಜಿಟಲ್ ಕ್ರಾಂತಿಯಿಂದಾಗಿ ವಿಶೇಷ ವಾಗಿ ಗ್ರಾಮೀಣ ಪ್ರದೇಶಗಳ ಹಿರಿ ಯ ನಾಗರಿಕರಲ್ಲಿ ನಿರ್ಲಕ್ಷ್ಯ ಮತ್ತು ಪ್ರತ್ಯೇಕತೆಯ ಭಾವನೆ ಉಂಟಾ ಗುತ್ತದೆ.

ಇದರಿಂದ ಹಿರಿಯ ನಾಗರಿ ಕರ ಆರೋಗ್ಯ ಮತ್ತು ಯೋಗಕ್ಷೇಮ ಕ್ಷೀಣಿಸುವ ಸಾಧ್ಯತೆ ಇದ್ದು, ಇದನ್ನು ತಪ್ಪಿಸಲೆಂದೇ ಈ ಕೇಂದ್ರಗಳು ತೆರೆದು ಅಲ್ಲಿ ಹಿರಿಯ ನಾಗರಿಕರನ್ನು ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಉದ್ದೇಶ ಹೊಂದಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಕಲಿಕಾ ಸಂಸ್ಥೆಯು ಟಾಟಾ ಟ್ರಸ್ಟ್ ಸಹಯೋಗದೊಂದಿಗೆ ಮುಂದಿನ ಎರಡು ವರ್ಷದಲ್ಲಿ ರಾಜ್ಯದಾದ್ಯಂತ 300 ಅರಿವು ಕೇಂದ್ರದಲ್ಲಿ ಈ ಸ್ಪಂದನಾ ಕೇಂದ್ರಗಳು ತೆರೆಯು ತ್ತಿದ್ದು, ಅದರಂತೆ ಕಲಬುರಗಿಯ ಜಿಲ್ಲೆಯಲ್ಲಿ ಪ್ರಸಕ್ತ 2025-26ನೇ ಸಾಲಿನಲ್ಲಿ 20 ಸ್ಪಂದನ ಕೇಂದ್ರಗಳು ಹಿರಿಯರ ಯೋಗಕ್ಷೇಮ ವಿಚಾರಿ ಸಲು ಆರಂಭವಾಗಲಿವೆ.

ಈ ಕೇಂದ್ರಗಳಲ್ಲಿ ದಿನದ ಮೊದಲಾರ್ಧದಲ್ಲಿ ಮೀಸಲಾದ ಅವಧಿಯಲ್ಲಿ ಹಿರಿಯ ನಾಗರಿಕರಿಗೆ ವಿವಿಧ ಚಟುವಟಿಕೆಗಳನ್ನು ನಡೆಸಲಾಗುತ್ತದೆ. ಜೊತೆಗೆ ಅವರಿಗೆ ವ್ಯಾಯಾಮ, ಆರೋಗ್ಯ ತಪಾಸಣೆ, ಯೋಗಾಸನ ಮಾಡಿಸುವುದರ ಜೊತೆಗೆ ವಿವಿಧ ಸೌಲಭ್ಯಗಳು ಮತ್ತು ಅಗತ್ಯ ಸೇವೆಗಳ ಕುರಿತು ಮಾಹಿತಿ ನೀಡಲಾಗುತ್ತದೆ.

ಎಲೆಲ್ಲಿ ಸ್ಪಂದನ ಕೇಂದ್ರಗಳು?: ಚಿತ್ತಾಪುರ ತಾಲೂಕಿನ ನಾಲವಾರ, ಕೊಲ್ಲೂರ, ಹಲಕಟ್ಟಾ, ಲಾಡ್ಲಾಪುರ, ಸನ್ನತ್ತಿ, ಭಾಗೋಡಿ, ಕಮರವಾಡಿ, ಸಾತನೂರ, ಆಲೂರ(ಬಿ) ಹಾಗೂ ಕಡಬೂರ, ಸೇಡಂ ತಾಲೂಕಿನ ರಿಬ್ಬನಪಲ್ಲಿ, ಕಾನಗಡ್ಡಾ, ಕೋಡ್ಲಾ, ಇಟ್ಕಲ್, ಮುಧೋಳ, ಲಿಂಗಂಪಲ್ಲಿ, ಕುರಕುಂಟಾ, ನೀಲಹಳ್ಳಿ, ಮಳಖೇಡ ಹಾಗೂ ಬಟಗೇರಾ(ಕೆ) ಗ್ರಾಮದ ಅರಿವು ಕೇಂದ್ರದಲ್ಲಿ ಸ್ಪಂದನ ಕೇಂದ್ರಗಳು ತೆರೆಯಲಿವೆ.



21 ರಂದು ಶ್ರೀ ಮರಡಿ ಮಲ್ಲಿಕಾರ್ಜುನ ಜಾತ್ರೆಯ ರಥೋತ್ಸವ -ಚೆನ್ನಮಲ್ಲಿಕಾರ್ಜುನ ಶ್ರೀ

ಸುರಪುರ,ಜ.12-

ಪ್ರತಿವರ್ಷದಂತೆ ಈ ವರ್ಷವೂ ದಕ್ಷಿಣ ಶ್ರೀಶೈಲ ಶ್ರೀ ಮರಡಿ ಮಲ್ಲಿಕಾರ್ಜುನ ದೇವರ ಜಾತ್ರಾ ಮಹೋತ್ಸವದ ಅಂಗವಾಗಿ ಜನವರಿ 21ರಂದು ಸಾಯಂಕಾಲ ರಥೋತ್ಸವ ಜರುಗಲಿದೆ ಎಂದು ಶ್ರೀಗಿರಿ ಮಹಾ ಸಂಸ್ಥಾನ ಮಠದ ಡಾ. ಚನ್ನಮಲ್ಲಿ ಕಾರ್ಜುನ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಭಾನುವಾರ ಶ್ರೀಮಠದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಜಾತ್ರಾ ಮಹೋತ್ಸವ ಹಾಗೂ ಡಾ. ಚನ್ನಮಲ್ಲಿಕಾರ್ಜುನ ಶಿವಾಚಾರ್ಯರ 6ನೇ ವರ್ಷದ ಗುರು ಪಟ್ಟಾಧಿಕಾರ ವರ್ಧಂತೋತ್ಸವ ಅಂಗವಾಗಿ ಇದೇ ಜ.12 ರಿಂದ 20 ರವರೆಗೆ ಪ್ರತಿದಿನ ರಾತ್ರಿ ಮಹಾಮಾತೆ ಶ್ರೀ ಇಟಗಿ ಭೀಮಾಂಬಿಕೆಯ ಪುರಾಣ ಪ್ರವಚನ ಹಾಗೂ 21ರಂದು ನಂದಿ ಬಸವೇಶ್ವರರಿಗೆ ರುದ್ರಾಭಿಷೇಕ ಬಿಲ್ವಾರ್ಚನೆ ಹಾಗೂ ಮಹಾಮಂಗಳಾರತಿ ಜರುಗಲಿದೆ, ಮಧ್ಯಾಹ್ನ ಪುರವಂತರ ಮಹಾ ಸೇವಾ ನಡೆಯಲಿದೆ ಎಂದು ತಿಳಿಸಿ. ಜನವರಿ 22 ರಿಂದ 5 ದಿನಗಳ ಕಾಲ ಜಾನುವಾರುಗಳ ಜಾತ್ರೆ ಹಾಗೂ 23ರಂದು ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆ, 24ರಂದು ಉಸುಕಿನ ಚೀಲ ಎತ್ತುವ ಸ್ಪರ್ಧೆ ಹಾಗೂ 25ರಂದು ಜೋಡು ಎತ್ತುಗಳಿಂದ ಕಲ್ಲು ಎಳೆಯುವ ಸ್ಪರ್ಧೆ ನಡೆಯಲಿದೆ ಎಂದು ತಿಳಿಸಿದರು. ಎಲ್ಲ ಕಾರ್ಯಕ್ರಮಗಳಲ್ಲಿ ಶ್ರೀಮಠದ ಭಕ್ತರು ತನು ಮನ ಧನ ಸೇವೆ ನೀಡಿ ಭಾಗವಹಿಸುವಂತೆ ಭಕ್ತರಿಗೆ ಕರೆ ನೀಡಿದ್ದಾರೆ. ಇದೇ ಸಂದರ್ಭದಲ್ಲಿ ಕಾರ್ಯಕ್ರಮದ ಭಿತ್ತಿ ಪತ್ರಗಳನ್ನು ಹಾಗೂ 2026ನೇ ಸಾಲಿನ ಶ್ರೀಮಠದ ಕ್ಯಾಲೆಂಡರ್ ಬಿಡುಗಡೆಗೊಳಿಸಲಾಯಿತು.

ಪೊಲೀಸ್ ಇಲಾಖೆಯಿಂದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಕುಂದುಕೊರತೆ ಸಭೆ

ಕೆಂಭಾವಿ,ಜ.12-

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಶನಿವಾರ ಜಿಲ್ಲಾ ಪೊಲೀಸ್ ಇಲಾಖೆಯಿಂದ ಪರಿಶಿಷ್ಠ ಜಾತಿ ಪರಿಶಿಷ್ಠ ಪಂಗಡಗಳ ಕುಂದುಕೊರತೆ ಸಭೆ ಏರ್ಪಡಿಸಲಾಗಿತ್ತು. ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ ಶಂಕರ ಅವರು, ನಮ್ಮ ದೇಶದ ಕಾನೂನು ಬಲಿಷ್ಠವಾಗಿದ್ದು ಕಾನೂನು ಮೀರಿ ಅಪರಾಧ ಕೃತ್ಯ ಮಾಡುವ ಯಾವುದೆ ವ್ಯಕ್ತಿ ಸಮಾಜದಲ್ಲಿ ಎಷ್ಟೆ ದೊಡ್ಡವರಾಗಿದ್ದರೂ ಅವರ ವಿರುದ್ಧ ದೂರು ಬಂದರೆ ಅವರನ್ನು ಬಂಧಿಸುವ ಅಧಿಕಾರ ಪೊಲೀಸ್ ಇಲಾಖೆಗೆ ಇದೆ ಎಂದು ಹೇಳಿದರು.

21ನೇ ಶತಮಾನಕ್ಕೆ ನಾವು ಕಾಲಿಟ್ಟದ್ದರೂ ಇಂದಿನ ಪ್ರತಿಯೊಂದು ರಂಗದಲ್ಲಿ ಜಾತಿ ವ್ಯವಸ್ಥೆ ಎದ್ದು ಕಾಣುತ್ತಿದೆ. ಸಾಮಾಜಿಕ ಜಾಲ ತಾಣಗಳಲ್ಲಿ, ತಿರುಗಾಡುವ ವಾಹನಗಳಲ್ಲಿ, ಮನೊರಂಜನೆ ನೀಡುವ ವಿವಿಧ ಕ್ಷೇತ್ರಗಳಲ್ಲಿ ಇನ್ನೂ ಜಾತಿ ವ್ಯವಸ್ಥೆ ಎದ್ದು ಕಾಣುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು. ಜಿಲ್ಲೆಯಲ್ಲಿ 2025-26ನೇ ಸಾಲಿನಲ್ಲಿ 84 ಪ್ರಕರ ಣಗಳು ಎಸ್.ಸಿ ಮತ್ತು ಎಸ್.ಟಿ ದೌರ್ಜನ್ಯ ಕಾಯ್ದೆಯಡಿ ಪ್ರಕರಣ ದಾಖಲಾಗಿದ್ದರೆ ಅತೀ ಹೆಚ್ಚು ಲೈಂಗಿಕ ದೌರ್ಜನ್ಯ (ಪೋಕ್ಸೊ) ಪ್ರಕರಣ ನಮ್ಮ ಜಿಲ್ಲೆಯಲ್ಲಿ ದಾಖಲಾಗಿವೆ ಎಂದು ಹೇಳಿದರು.

ಒಬ್ಬ ವ್ಯಕ್ತಿಗೆ ಒಂದು ಸಮುದಾಯದ ಅಥವಾ ಒಂದು ಜಾತಿಯ ವ್ಯಕ್ತಿಗಳಿಂದ ಅಥವಾ ಹಲವರಿಂದ ತೊಂದರೆಯಾಗುತ್ತಿದ್ದರೆ ಅಂತವರು ಧೈರ್ಯದಿಂದ ಮುಂದೆ ಬಂದು ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದರೆ ಮುಲಾಜಿಲ್ಲದೆ ಅಂಥಾ ಪ್ರಕರಣಕ್ಕೆ ನಮ್ಮ ಇಲಾಖೆ ಕಾನೂನು ರೀತಿ ಕ್ರಮ ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ವಿವಿಧ ದಲಿತ ಮುಖಂಡರುಗಳು ಮತ್ತು ವಾಲ್ಮೀಕಿ ಸಮುದಾಯದ ಮುಖಂಡ ರುಗಳು ಮಾತನಾಡಿ ಕೆಂಭಾವಿ ವಲ ಯದ ಹಲವು ಗ್ರಾಮಗಳಲ್ಲಿ ಇನ್ನೂ ಅಸ್ಪ್ರಶ್ಯತೆ ಮತ್ತು ದಲಿತರಿಗೆ ಸ್ಮಶಾನ ಭೂಮಿಯ ಸಮಸ್ಯೆ ಜೀವಂತವಿದ್ದು ಇದನ್ನು ಹೋಗಲಾಡಿಸಲು ಗ್ರಾಮೀ ಣ ಪ್ರದೇಶದಲ್ಲಿಯೂ ಇಂಥಾ ಸಭೆಗಳು ಪೊಲೀಸ್ ಇಲಾಖೆಯಿಂದ ಆಯೋಜನೆ ಮಾಡಬೇಕು ಎಂದು ಮನವಿ ಮಾಡಿದರು.

ಡಿವೈಎಸ್‌ಪಿ ಜಾವೇದ ಇನಾಮು ದಾರ, ಸಿಪಿಐ ರವಿಕುಮಾರ, ಗ್ರೇಡ್-2 ತಹಸೀಲ್ದಾರ ಮಲ್ಲಯ್ಯ ದಂಡು, ಎಸ್.ಸಿ, ಎಸ್.ಟಿ ತಡೆ ಕಾಯ್ದೆ ಸಮಿತಿ ಸದಸ್ಯರಾದ ಮರೆಪ್ಪ, ನಿಂಗಪ್ಪ, ಅಪರಾಧ ವಿಭಾಗದ ಪಿಎಸ್‌ಐ ಹಣಮಂತ ಸಿದ್ದಾಪೂರ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಅಪ್ಪು ರಾಠೋ ಡ, ತಾಪಂ ಅಧಿಕಾರಿ ನಾಗರಾಜ, ಪುರಸಭೆ ಸಿಬ್ಬಂದಿ ಸಿದ್ರಾಮಯ್ಯ ಇಂಡಿ ಇದ್ದರು. ಪಿಎಸ್‌ಐ ಅಮೋಜ ಕಾಂಬಳೆ ಸ್ವಾಗತಿಸಿದರು. ಪಿಸಿ ರೇಖಾ ನಿರೂಪಣೆ ಮಾಡಿದರು.



ಗಂಗಾವತಿ:ಗಂಗಾವತಿ ಸಮೀಪದ ನವಲಿ ಶ್ರೀಭೋಗಾಪುರೇಶ ದೇವಸ್ಥಾನದಲ್ಲಿ ಗೋಪಾಲದಾಸರ ಆರಾಧನೆ ನಿಮಿತ್ಯ ಶ್ರೀಭೋಗಾಪುರೇಶ ಸ್ವಾಮಿಗೆ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ಆರಾಧನೆ ನೇತೃತ್ವವನ್ನು ಮೆಟ್ರಿ ಪ್ರಭಾಕರರಾವ್ ಕರಣಂ ಮತ್ತು ಸಹೋದರರು ವಹಿಸಿದ್ದರು.

14ರಂದು ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಆಚರಿಸಲು ನಿರ್ಧಾರ



ಕಲಬುರಗಿ,ಜ.12-

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿಯನ್ನು ಇದೇ ಜ.14 ರಂದು ವಿಜೃಂಭಣೆ ಯಿಂದ ಆಚರಿಸಲು ಜಿಲ್ಲಾಧಿಕಾರಿ ಕಚೇರಿಯ ಸಹಾಯಕರಾದ ಶಿವಪ್ರಭು ಹಿರೇಮಠ ಅವರ ಅಧ್ಯಕ್ಷತೆಯ ಸಭೆಯಲ್ಲಿ ನಿರ್ಧರಿಸಲಾಯಿತು.

ಇತ್ತೀಚಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಇದೇ ಜನೆವರಿ 14 ರಂದು ಕಲಬುರಗಿ ನಗರದ ಡಾ. ಎಸ್.ಎಂ ಪಂಡಿತ ರಂಗಮಂದಿರದಲ್ಲಿ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಕಾರ್ಯಕ್ರಮ ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸರ್ಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು. ಸಭೆ ಯಲ್ಲಿ ನುರಿತ ಉಪನ್ಯಾಸಕರನ್ನು ಸಹ ಆಹ್ವಾನಿಸಲು ತೀರ್ಮಾನಿಸಲಾಯಿತು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರು ವ್ಯವಸ್ಥೆ ಮಾಡುವುದರ ಜೊತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇ ಶಕಿ ಜಗದೀಶ್ವರಿ ನಾಶಿ ಪ್ರೋಟೋ ೀಕಾಲ್ ಪ್ರಕಾರ ಕಾರ್ಯಕ್ರಮ ಪತ್ರಿಕಾ ಆಮಂತ್ರಣ ಮುದ್ರಿಸಲಾ ಗುವುದು. ನಾಡಗೀತೆ, ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿ ಸಲಾಗುವುದು ಎಂದರು. ವೇದಿಕೆ ಮೇಲೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಚುನಾವಣೆ ತಹ ಶೀಲ್ದಾರ ಪಂಪಯ್ಯ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾ ಜದ ಮುಖಂಡರಾದ ಮಲ್ಲಿಕಾ ರ್ಜುನ, ಡಾ.ಶರಣಪ್ಪ ಗುಂಡಗುರ್ತಿ, ಹಣಮಂತ ಜಾಧವ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ರಾಷ್ಟ್ರೀಯ ಯುವ ದಿನದಂದು ರಾಯಚೂರಿನಲ್ಲಿ ಐತಿಹಾಸಿಕ ಸ್ವಚ್ಛತಾ ಓಟ

ಆಕರ್ಷಣೆಯಾಗಿ ರಾಯಚೂರು ಉತ್ಸವ-2026 ಎಂಬ ರೂಪದಲ್ಲಿ ಮಾನವ ಸರಪಳಿ ರಚಿಸಲಾಗಿ, ಅದನ್ನು ಡ್ರೋನ್ ಮೂಲಕ ಚಿತ್ರೀಕರಿಸಲಾಯಿತು. ಈ ದೃಶ್ಯಗಳು ರಾಯಚೂರು ಉತ್ಸವಕ್ಕೆ ಹೊಸ ಉತ್ಸಾಹ ಮತ್ತು ಮೆರಗು ನೀಡಿದವು. ಈ ಮೂಲಕ ರಾಯಚೂರು ನಗರವು ಒಗ್ಗಟ್ಟಿನ ಶಕ್ತಿ ಮತ್ತು ಸಕಾರಾತ್ಮಕ ಚಿಂತನೆಯೊಂದಿಗೆ ಮುಂದಿನ ಹೆಜ್ಜೆ ಇಡುತ್ತಿದೆ ಎಂಬ ಸಂದೇಶ ಸ್ಪಷ್ಟವಾಗಿ ಮೂಡಿಬಂದಿತು.

ರಾಷ್ಟ್ರೀಯ ಯುವ ದಿನದ ಅಂಗವಾಗಿ ನಡೆದ ಈ ಸ್ವಚ್ಛತಾ ಓಟದಲ್ಲಿ ವಿಜೇತರು ಈ ಕೆಳಕಂಡಂತಿದ್ದಾರೆ: ಪುರುಷರ ವಿಭಾಗ: ★ ಪ್ರಥಮ - ತಾಯಪ್ಪ ನಾಯಕ್ ★ ದ್ವಿತೀಯ - ನಿಂಗಣ್ಣ ಚಿಂಚೋಡಿ ★ ತೃತೀಯ - ತಿಮ್ಮಪ್ಪ ವಡವಟ್ಟಿ

ಮಹಿಳಾ ವಿಭಾಗ: ★ ಪ್ರಥಮ - ಜ್ಯೋತಿ ★ ದ್ವಿತೀಯ - ಯಲ್ಲಮ್ಮ ★ ತೃತೀಯ - ಭವ್ಯಶ್ರೀ ದೇವಸಗೂರು

ಸ್ವಚ್ಛತಾ ಓಟದಲ್ಲಿ ಭಾಗವಹಿಸಿದ ಎಲ್ಲಾ ಸ್ಪರ್ಧಾರ್ಥಿಗಳಿಗೆ ಕ್ಯಾಪ್ಗಳು ಹಾಗೂ ಟಿ-ಶರ್ಟ್ಗಳನ್ನು ವಿತರಿಸಲಾಯಿತು. ವಿಜೇತರಿಗೆ ಪ್ರಮಾಣಪತ್ರಗಳು, ಕಿಟ್ಗಳು ಮತ್ತು ನಗದು ಬಹುಮಾನಗಳನ್ನು ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ರಾಯಚೂರು ನಗರದ ಯುವ ಮುಖಂಡ ರವಿ ಬೋಸುರಾಜು, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಜಯಣ್ಣ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷು ಗಿರಿ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತ ಡಾ. ಹಂಪಣ್ಣ, ತಹಸೀಲ್ದಾರ ಸುರೇಶ್ ವರ್ಮಾ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೃಷ್ಣ ಶಾವಂತಗೇರಿ, ಜಿಲ್ಲಾ ಘಟಕದ ಪದಾಧಿಕಾರಿಗಳು ಹಾಗೂ ವಿವಿಧ ವೃಂದ ಸಂಘಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಗಾಯತ್ರಿ ಭವನಕ್ಕೆ ಅನುದಾನ ಮಂಜೂರಾತಿಗೆ ಸಂಸದರಿಗೆ ಮನವಿ

ದಿನಗಳಲ್ಲಿ ಸಾಮಾಜಿಕ ಸಭೆಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ಧಾರ್ಮಿಕ ಹಾಗೂ ಶೈಕ್ಷಣಿಕ ಚಟುವಟಿಕೆಗಳು ಮತ್ತು ಸಾರ್ವಜನಿಕ ಹಿತಾಸಕ್ತಿಯ ಕಾರ್ಯಕ್ರಮಗಳಿಗೆ ಕೇಂದ್ರವಾಗುವ ಮಹತ್ವದ ಸಮುದಾಯ ಸೌಕರ್ಯವಾಗಲಿದೆ ಎಂದು ವಿವರಿಸಲಾಯಿತು. ಈ ಹಿನ್ನೆಲೆಯಲ್ಲಿ, ಜನೋಪಯೋಗಿ ಕಟ್ಟಡ ನಿರ್ಮಾಣ ಕಾರ್ಯಕ್ಕೆ ಸಂಸದರ ಗೌರವಾನ್ವಿತ ನಿಧಿಯಿಂದ ಅಥವಾ ಸಂಬಂಧಪಟ್ಟ ಯೋಜನೆಯಡಿ ಅನುದಾನ ಮಂಜೂರು ಮಾಡುವಂತೆ ಸಹಾನುಭೂತಿಯೊಂದಿಗೆ ಪರಿಗಣಿಸುವಂತೆ ಕೋರಲಾಯಿತು.

ಈ ಸಂದರ್ಭದಲ್ಲಿ ವೇಣುಗೋಪಾಲ ಆರ್ಚಾ ಇನಾಂದಾರ್, ರಮೇಶ್ ಕುಲಕರ್ಣಿ, ವೆಂಕಟೇಶ್ ದೇಸಾಯಿ ಸೇರಿದಂತೆ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

ರಾಯಚೂರು ಮಹಾನಗರ ಪಾಲಿಕೆಯಿಂದ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಡಿ ಅರ್ಜಿ ಆಹ್ವಾನ

ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳು ಸಲ್ಲಿಸದೇ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೇ ನೇರವಾಗಿ ವಿಭಾಗದ ಸಿಬ್ಬಂದಿಯವರು ತಿರಸ್ಕೃತ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ನೋಟಿಸ್ ಬೋರ್ಡ್ ನೋಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೆಸ್ಕಾಂ ನಗರ-2: ಇಂದು ವಿದ್ಯುತ್ ವ್ಯತ್ಯಯ

ನಿರಂತರ ಸೇವಾ ಕೇಂದ್ರ, ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯಶಸ್ವಿನಿ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಡಿ ನೋಂದಣಿ ಪ್ರಕ್ರಿಯೆ ಆರಂಭ

ಚಿಕಿತ್ಸೆ ಗಳನ್ನು ಯಶಸ್ವಿನಿ ಯೋಜನೆಯಡಿ ಅಳವಡಿಸಿಕೊಂಡಿರುವುದರಿಂದ ಸದರಿ ಯೋಜನೆಯ ಫಲಾನುಭವಿಗಳ ಕುಟುಂಬಕ್ಕೆ ವಾರ್ಷಿಕ ವೈದ್ಯಕೀಯ ಚಿಕಿತ್ಸಾ ವೆಚ್ಚದ ಗರಿಷ್ಠ ಮಿತಿ 5.00 ಲಕ್ಷ ರೂ.ಗಳಿಗೆ ನಿಗಧಿಪಡಿಸಿದೆ. ರಾಜ್ಯದ ಯಾವುದೇ ಯಶಸ್ವಿನಿ ನೆಟ್‌ವರ್ಕ ಅಸ್ಪತ್ರೆಯಲ್ಲಿ ನಗದು ರಹಿತ ಚಿಕಿತ್ಸೆ ಪಡೆಯಲು ಅವಕಾಶವಿರುತ್ತದೆ. ಸದರಿ ಯೋಜನೆಯಡಿಯಲ್ಲಿ ನೋಂದಾಯಿಸಿ ಪ್ರಯೋಜನೆ ಪಡೆದುಕೊಳ್ಳಲು ಕೋರಲಾಗಿದೆ. 2025-26ನೇ ಯಶಸ್ವಿನಿ ಯೋಜನೆಯ ಅವಧಿ ದಿನಾಂಕ:03-01-2026 ರಿಂದ 31-03-2026ರವರೆಗೆ ಜಾರಿಯಲ್ಲಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸ್ಥಳೀಯ ಸಹಕಾರ ಸಂಘಗಳು ಹಾಗೂ ಸಹಕಾರ ಇಲಾಖಾ ಕಚೇರಿಗಳನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ: ರಾಯಚೂರು 988730795, 7996998253, 08532-226268/9902165419, ಸಿಂಧನೂರು- 08535-230550/9844669557, ಮಾನವಿ 9164034407, ಲಿಂಗಸೂಗೂರು 9972551962, ಸಹಕಾರ ವಿಸ್ತೀರ್ಣಾಧಿಕಾರಿ ರಾಯಚೂರು 8904641721, ದೇವದುರ್ಗ 9686647802, ಸಿಂಧನೂರು 9880744147, ಮಸ್ಕಿ 9901103053, ಸಿರವಾರ 9900612229ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಸಹಕಾರ ಸಂಘಗಳ ಉಪ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನರೇಗಾ ಯೋಜನೆ ಪುನರ್ ಸ್ಥಾಪಿಸಲು ಕಾಂಗ್ರೆಸ್ ಪಕ್ಷದಿಂದ ನಿರಂತರ ಹೋರಾಟ-ಕುಮಾರ ನಾಯಕ

ರಕ್ಷಣೆಯಿಲ್ಲದ ಕಾರ್ಮಿಕ ಶೋಷಣೆ ದಲಿತ ಹಾಗೂ ಆದಿವಾಸಿ ಕುಟುಂಬಗಳ ಮೇಲೆ ಹೆಚ್ಚುವರಿ ಆರ್ಥಿಕ-ಸಾಮಾಜಿಕ ಒತ್ತಡ ಬಲವಂತದ ವಲಸೆ ಮತ್ತು ಗ್ರಾಮೀಣ ಜೀವನೋಪಾಯಗಳ ಕುಸಿತ ಸಂಭವಿಸುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ನರೇಗಾ ಯೋಜನೆಯಿಂದ 2023ರಿಂದ ಇಂದಿನವರೆಗೆ ಕರ್ನಾಟಕದಲ್ಲಿ 36 ಕೋಟಿ ಮಾನವ ಕೆಲಸದ ದಿನಗಳು, 26 ಲಕ್ಷಕ್ಕೂ ಹೆಚ್ಚು ಜನರಿಗೆ ಉದ್ಯೋಗ, 1 ಕೋಟಿ ಕುಟುಂಬಗಳಿಗೆ ಲಾಭ, ಪರಿಶಿಷ್ಟ ಜಾತಿ-ಪಂಗಡದ ಲಕ್ಷಾಂತರ ಜನರಿಗೆ ಉದ್ಯೋಗ ಹಾಗೂ 16 ಲಕ್ಷಕ್ಕೂ ಹೆಚ್ಚು ದೀರ್ಘಕಾಲಿಕ ಆಸ್ತಿಗಳ ಸೃಷ್ಟಿ ಸಾಧ್ಯವಾಗಿದೆ ಎಂದು ಮಾಹಿತಿ ನೀಡಿದರು. ನರೇಗಾ ಯೋಜನೆ ಭಾರತ ಸಂವಿಧಾನದ ವಿಧಿ 21ರ ಅಡಿಯಲ್ಲಿ ಜೀವನೋಪಾಯದ ಹಕ್ಕು, ವಿಧಿ 14ರ ಸಮಾನತೆ, ವಿಧಿ 19(1)(ಜ)ರ ಉದ್ಯೋಗ ಸ್ವಾತಂತ್ರ್ಯ ಮತ್ತು ವಿಧಿ 23ರ ಬಲವಂತದ ಕಾರ್ಮಿಕ ನಿಷೇಧದ ಆತ್ಮವನ್ನು ಅನುಷ್ಠಾನಗೊಳಿಸುವ ಮಹತ್ವದ ಕಾಯ್ದೆಯಾಗಿದೆ ಎಂದು ವಿವರಿಸಿದರು. ಜೊತೆಗೆ ನಿರ್ದೇಶಕ ತತ್ವಗಳಾದ ವಿಧಿ 39, 41, 42 ಹಾಗೂ 43ರ ಉದ್ದೇಶಗಳನ್ನು ನರೇಗಾ ಸಾಕಾರಗೊಳಿಸುತ್ತಿದೆ ಎಂದರು.

ನರೇಗಾ ನಮ್ಮದೇ ಯೋಜನೆ, ನಮ್ಮದೇ ಆಡಳಿತ, ನಮ್ಮದೇ ಉದ್ಯೋಗ ಎಂಬ ತತ್ವದ ಮೇಲೆ ನಿಂತಿದೆ. ನರೇಗಾವನ್ನು ಸಂಪೂರ್ಣವಾಗಿ ಮರುಜಾರಿಗೊಳಿಸಿ ಉದ್ಯೋಗದ ಹಕ್ಕನ್ನು ರಕ್ಷಿಸಬೇಕು. ಗ್ರಾಮಗಳ ಸ್ವಯಂ ಆಡಳಿತದ ಹಕ್ಕನ್ನು ಮರುಸ್ಥಾಪಿಸಬೇಕು. ಕನ್ನಡಿಗರ ಮೇಲಿನ ಸರಣಿ ಅನ್ಯಾಯಗಳಿಗೆ ಕೊನೆ ಹಾಡಬೇಕು ಎಂದು ಸಂಸದರು ಆಗ್ರಹಿಸಿದರು. ಇಲ್ಲವಾದರೆ ಮುಂದಿನ ದಿನಗಳಲ್ಲಿ ದೇಶದಾದ್ಯಂತ ಹೋರಾಟಗಳು ನಡೆಯಲಿವೆ ಎಂದು ಎಚ್ಚರಿಕೆ ನೀಡಿದರು. ಈ ಪತ್ರಿಕಾ ಗೋಷ್ಠಿಯಲ್ಲಿ ಜಯಣ್ಣ. ರವಿ ಬೋಸರಾಜು, ಕೆ. ಶಾಂತಪ್ಪ, ಜಯಂತರಾವ್ ಪತ್ತಂಗೆ, ಜಯರಾಮ್, ಶ್ರೀನಿವಾಸರೆಡ್ಡಿ, ಮಹಮ್ಮದ್ ಶಾಲಾಂ, , ಮರಿಸ್ವಾಮಿ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಹಾಲುಮತ ಸಂಸ್ಕೃತಿ ವೈಭವ ಕಾರ್ಯಕ್ರಮ ಯಶಸ್ವಿಗೆ ವಿರುಪಾಕ್ಷಿಗೌಡ ಮನವಿ

ಪಂಚಾಯತ್ ಸದಸ್ಯರು, ಟಗರಿನ ಕಾಳಗ, ಎತ್ತುಗಳು ಭಾರ ಎಳೆಯುವ ಸ್ಪರ್ಧೆ ಸೇರಿದಂತೆ ಬೊಮ್ಮಗುಂಡೇಶ್ವರಾ ಸಿದ್ದರಾಮೇಶ್ವರ ಉತ್ಸಾಹ ನಡೆಯಲಿದೆ. ಕಾರ್ಯಕ್ರಮದಲ್ಲಿ ಕನಕ ಗುರುಪೀಠದ ಪೀಠಾಧಿಪತಿಗಳು ಕರ್ನಾಟಕ ರಾಜ್ಯ ಹಾಗೂ ವಿವಿಧ ರಾಜ್ಯಗಳ ಗಣ್ಯ ವ್ಯಕ್ತಿಗಳು ಭಾಗವಹಿಸಲಿದ್ದಾರೆ ಹೀಗಾಗಿ ರಾಯಚೂರು ಜಿಲ್ಲೆಯ ಹಾಗೂ ಎಲ್ಲಾ ತಾಲೂಕುಗಳ ಭಕ್ತಾದಿಗಳು ಹೆಚ್ಚಿನ ಜನಸಂಖ್ಯೆ ಯೊಂದಿಗೆ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಿರವಾರ ತಾಲೂಕ ಕರ್ನಾಟಕ ಪತ್ರಕರ್ತರ ಸಂಘದ ಅಧ್ಯಕ್ಷರು ಹಾಗೂ ಶ್ರೀ ಬೀರಲಿಂಗೇಶ್ವರ ಎಜುಕೇಶನ್ ಟ್ರಸ್ಟ್ ಅಧ್ಯಕ್ಷರು ಸಿರವಾರ ಮತ್ತು ರಾಯಚೂರು ಜಿಲ್ಲಾ ಕುರುಬರ ಸಂಘದ ಮಾಧ್ಯಮ ಸಂಚಾಲಕರು ಮನವಿ ಮಾಡಿ ಯಶಸ್ವಿಗೆ ಸಮಸ್ತ ಹಾಲುಮತ ಸಮಾಜದ ಬಾಂಧವರು ಗುರುಹಿರಿಯರು ಸಹಕರಿಸಲು ಪತ್ರಿಕಾ ಪ್ರಕಟಣೆ ಮೂಲಕ ಕೋರಿದ್ದಾರೆ

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದಲ್ಲಿ ವಿಶೇಷ ಉಪನ್ಯಾಸ

ಅರ್ಥವ್ಯವಸ್ಥೆ ಭವಿಷ್ಯದ ಭದ್ರತೆಗೆ ಅತ್ಯಗತ್ಯ : ಪ್ರೊ.ಕೆಳಗಿನಮನಿ

ರಾಯಚೂರು,ಜ.12-

ಜೀವನ ಯೋಜನೆಗೆ ಅರ್ಥ ಶಾಸ್ತ್ರದ ಅನ್ವಯ ಮುಖ್ಯ ಪಾತ್ರ ವಹಿಸುತ್ತದೆ. ನಮ್ಮ ಸೀಮಿತ ಸಂಪನ್ಮೂಲಗಳಾದ ಹಣ, ಸಮಯ, ಶ್ರಮಗಳನ್ನು ಬಳಸಿಕೊಂಡು ಜೀವನ ಗುರಿಗಳನ್ನು ಮತ್ತು ಕನಸುಗಳನ್ನು ಸಾಧಿಸಲು ವೈಯಕ್ತಿಕ, ಆರ್ಥಿಕ ನಿರ್ಧಾರಗಳನ್ನು ತೆಗೆದು ಕೊಳ್ಳುವುದನ್ನು ಒಳಗೊಂಡಿದ್ದು, ಹಣಕಾಸು ಭವಿಷ್ಯದ ಭದ್ರತೆಗೆ ಅತ್ಯಗತ್ಯವಾಗಿದೆ ಎಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ.ಶಿವಾನಂದ ಕೆಳಗಿನಮನಿ ಹೇಳಿದರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಸಭಾಂಗಣದಲ್ಲಿ ಅರ್ಥಶಾಸ್ತ್ರ ವಿಭಾಗ ದಿಂದ ಇತ್ತೀಚೆಗೆ ಆಯೋಜಿಸಲಾಗಿದ್ದ ಮೂಲ ಅರ್ಥಮಾಪನಶಾಸ್ತ್ರ ಪರಿ ಚಯ' ಎನ್ನುವ ವಿಷಯ ಕುರಿತ ವಿಶೇಷ ಉಪನ್ಯಾಸ ಕಾರ್ಯ ಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅರ್ಥಶಾಸ್ತ್ರ ಹಣಕಾಸು ನಿರ್ವಹಣೆಯಿಂದ ಹಿಡಿದು ರಾಷ್ಟ್ರೀಯ, ಜಾಗತಿಕ ಮಟ್ಟದ ನೀತಿಗಳವರೆಗೆ ನಮ್ಮ ಜೀವನದ ಪ್ರತಿ ಹಂತದಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಜಾಗತೀಕರಣ ಮತ್ತು ತಾಂತ್ರಿಕ ಪ್ರಗತಿಯನ್ನು ತಿಳಿಸುವ ಆಧುನಿಕ ವಿಧಾನಗಳವರೆಗೆ ವಿಕಸಗೊಂಡಿರುವ ಅರ್ಥಶಾಸ್ತ್ರ ನೀತಿಗಳನ್ನು ರೂಪಿಸುವಲ್ಲಿ ಮತ್ತು ಬಡತನ, ಹಣದುಬ್ಬರ ಹಾಗೂ ನಿರುದ್ಯೋಗದಂತಹ ಸಮಕಾಲೀನ ಸವಾಲುಗಳನ್ನು ಪರಿಹರಿಸುತ್ತದೆ ಎಂದು ಹೇಳಿದರು.

ಯಾವುದೇ ಒಂದು ವಿಷಯವನ್ನು ವಿವಿಧ ಆಯಾಮಗಳಿಂದ ಗಮನಿಸಿ ಅಧ್ಯಯನ ಮಾಡಿದಾಗ ಆಯಾ ವಿಷಯಗಳಲ್ಲಿ ಪರಿಣಿತಿ ಹೊಂದಲು ಸಾಧ್ಯ. ವಿದ್ಯಾರ್ಥಿಗಳಿಗೆ ಹಣ ಕಾಸು ನಿರ್ವಹಣೆಯ ಕೌಶಲ್ಯಗಳನ್ನು ತಿಳಿದುಕೊಳ್ಳಲು ಆರ್ಥಿಕ ಸಾಕ್ಷ ರತೆ ಅರಿವು ಪ್ರಧಾನವಾಗಿರಬೇಕು. ಜೊತೆಗೆ ಪಠ್ಯ ವಿಷಯಗಳನ್ನು ಮೀರಿ ವಿಶಾಲ ಜ್ಞಾನ ಅಗತ್ಯವಿದ್ದು, ವಿಮರ್ಶಾತ್ಮಕ ಚಿಂತನೆ, ಜೀವನ ಕೌಶಲ್ಯ ಅಭಿವೃದ್ಧಿಪಡಿ ಸಿಕೊಳ್ಳಲು ಅವರನ್ನು ಸುಸಜ್ಜಿತ ಮತ್ತು ಸಂಕೀರ್ಣ ಜಗತ್ತಿಗೆ ಸಿದ್ಧಗೊಳಿಸಲು ಶೈಕ್ಷಣಿಕ ಕಾರ್ಯಕ್ರಮಗಳನ್ನು ನಮ್ಮ ವಿಶ್ವ ವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ದಾವಣಗೆರೆ ವಿಶ್ವವಿದ್ಯಾಲಯದ ಶಿವಗಂಗೋತ್ರಿಯ ಅರ್ಥಶಾಸ್ತ ವಿಭಾಗದ ಹಿರಿಯ ಪ್ರಾಧ್ಯಾಪಕರಾದ ಪ್ರೊ. ರಂಗಪ್ಪ ಕೆ.ಬಿ.ಅವರು ತಮ್ಮ ಉಪನ್ಯಾಸ ಮಂಡಿಸುತ್ತಾ, ನಮ್ಮ ಯುವ ಜನರ ಬದುಕನ್ನು ನಿರುದ್ಯೋಗದ ಸಮಸ್ಯೆ ತುಂಬಾ ಕಾಡು ತ್ತಿದೆ. ತೀವ್ರಗತಿಯಲ್ಲಿ ಏರಿಕೆಯಾಗುತ್ತಿರುವ ಹಣದುಬ್ಬರವು ಆರ್ಥಿಕ ತೆಯನ್ನು ದುರ್ಬಲ ಗೊಳಿಸುತ್ತಿದೆ. ಕೌಶಲ್ಯ ಬೇಡಿಕೆ ಕೊರತೆಯಿಂದ ಉದ್ದಿಮೆ ರಂಗದಲ್ಲಿ ಉತ್ಪಾದನೆ ಕುಸಿದಿದೆ. ಬೋಧನೆಯ ಜೊತೆಗೆ ವಿದ್ಯಾರ್ಥಿಗಳಲ್ಲಿ ಸೃಜಶೀಲ ಕೌಶಲ್ಯಗಳನ್ನು ಬೆಳಸುವುದು ಮುಖ್ಯವಾಗಿದೆ. ಆರ್ಥಿಕ ಸಿದ್ಧಾಂತಗಳನ್ನು ಪರೀಕ್ಷಿಸಲು ಗಣಿತ ಶಾಸ್ತ ಮತ್ತು ಸಂಖ್ಯಾಶಾಸ್ತದ ವಿಧಾನಗಳನ್ನು ಬಳಸುವ ಒಂದು ಶಾಖೆ ಅರ್ಥಮಾಪನಶಾಸ್ತವಾಗಿದ್ದು. ಆರ್ಥಿಕ ದತ್ತಾಂಶವನ್ನು ವಿಶ್ಲೇಷಿಸಿ, ನೈಜ ಪ್ರಪಂಚದ ಆರ್ಥಿಕ ವಿದ್ಯಮಾನಗಳನ್ನು ಅರ್ಥ ಮಾಡಿಕೊಳ್ಳಲು ಸಹಾಯ ಮಾಡುತ್ತದೆ ಎಂದರು.

ಅರ್ಥವ್ಯವಸ್ಥೆಯ ತಾಯಿಬೇರು ಅರ್ಥಶಾಸ್ತವಾಗಿದೆ. ಸಿಗದಿರುವುದರ ಬಗ್ಗೆ ಚಿಂತಿಸದೆ, ನಿಮ್ಮ ಸಾಮರ್ಥ್ಯದ ಕೆಲಸಖಿಢಟಖಿಫ ಒತ್ತು ನೀಡಿ. ಪ್ರಸ್ತುತ ಮಾರುಕಟ್ಟೆಯಲ್ಲಿ ಬೇಡಿಕೆ ಇರುವ ವೃತ್ತಿ ಕೌಶಲ್ಯಗಳನ್ನು ಕಲಿತು, ನಿಮ್ಮ ಜೀವನ ಯೋಜನೆಗಳನ್ನು ರೂಪಿಸಿಕೊಳ್ಳಿ ಎಂದು ಅವರು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಡೀನರು ಹಾಗೂ ಹಿರಿಯ ಪ್ರಾಧ್ಯಾಪಕರಾದ ಪ್ರೊ. ಪಿ.ಭಾಸ್ಕರ, ಅಧ್ಯಕ್ಷೀಯ ನುಡಿಗ'ಳನ್ನಾಡಿದರು, ಪ್ರೊ. ಪಾರ್ವತಿ ಸಿ.ಎಸ್., ಮಾತನಾಡಿದರು.

ಕಾರ್ಯಕ್ರಮದಲ್ಲಿ ಗ್ರಂಥಪಾಲ ಕರಾದ ಡಾ.ಜಿ.ಎಸ್ ಬಿರಾದರ, ವಿಭಾಗದ ಉಪನ್ಯಾಸಕರಾದ ಡಾ. ಶಂಕರಾನಂದ ಜಿ, ದುರುಗಪ್ಪ ಗಣೇ ಕಲ್ ಹಾಗೂ ಶಿವರಾಜ ಹರವಿ ಸೇರಿದಂತೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಡಾ.ನಾಗರಾಜ ಕೆ. ಅತಿಥಿಗಳನ್ನು ಪರಿಚಯಿಸಿದರು, ರಾಮಚಂದ್ರಪ್ಪ ಪ್ರಾಸ್ತಾವಿಕ ನುಡಿಗಳನ್ನಾಡಿದರು, ವಿಭಾಗದ ವಿದ್ಯಾರ್ಥಿಗಳಾದ ನರಸಮ್ಮ ಪ್ರಾರ್ಥಿಸಿದರು, ರಾಮಾಂಜನೇಯ ಸ್ವಾಗತಿಸಿದರು, ಸಂಗೀತಾ ನಿರೂಪಿಸಿದರು, ಮಹೇಂದ್ರ ಕುಮಾರ ವಂದಿಸಿದರು.

ಅರ್ಜಿ ಪೂರ್ಣಗೊಳಿಸಲು ಕಾಲಾವಕಾಶ- ಲಿಂಗನಗೌಡ

ಸಿಂಧನೂರು,ಜ.12-

ಸಿಂಧನೂರು ಶಿಶು ಅಭಿವೃದ್ಧಿ ಯೋಜನೆಯಡಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅಪೂರ್ಣ ಅರ್ಜಿಗಳನ್ನು ಸಲ್ಲಿಸಿರುವ ಅಭ್ಯರ್ಥಿಗಳಿಗೆ ಪೂರ್ಣಗೊಳಿಸಲು ಆನ್‌ಲೈನ್‌ನಲ್ಲಿ ಕಾಲಾವಕಾಶ ನೀಡಲಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅಧಿಕಾರಿ ಲಿಂಗನಗೌಡ ತಿಳಿಸಿದ್ದಾರೆ.

ಶನಿವಾರ ಹೇಳಿಕೆ ನೀಡಿರುವ ಅವರು, ಸಿಂಧನೂರು ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಒಂದು ಅಂಗನವಾಡಿ ಕಾರ್ಯಕರ್ತೆ ಮತ್ತು ಏಳು ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಣೆ ಹೊರಟಿಸಿ, ವೆಬ್‌ಸೈಟ್ ಮುಖಾಂತರ ಡಿಸೆಂಬರ್ 8, 2025 ರಿಂದ ಜನವರಿ 7, 2026 ರವರೆಗೆ ಆನ್‌ಲೈನ್‌ನಲ್ಲಿ ಆಸಕ್ತ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿತ್ತು.

ಆದರೆ ಕೆಲವೊಂದು ಅಭ್ಯರ್ಥಿಗಳು ಅಪೂರ್ಣ ಅರ್ಜಿಗಳನ್ನು ಸಲ್ಲಿಸಿದ್ದು, ಅಂತಹ ಅಭ್ಯರ್ಥಿಗಳಿಗೆ ಮಾತ್ರ ಅರ್ಜಿಗಳನ್ನು ಪೂರ್ಣಗೊಳಿಸಲು ವೆಬ್‌ಸೈಟ್‌ನಲ್ಲಿ ಇಲಾಖೆಯಿಂ ದಲೇ ಜ.8 ರಿಂದ 15 ರವರೆಗೆ ಅವಕಾಶ ಕಲ್ಪಿಸಲಾಗಿದೆ. ಜಿಲ್ಲಾ ಮಟ್ಟದಿಂದ ಅಪೂರ್ಣಗೊಂಡ ಅರ್ಜಿಗಳನ್ನು ಪುನಃ ಸಲ್ಲಿಸಲು ಪ್ರಕಟಣೆ ಹೊರಡಿಸಲಾಗಿದೆ. ಅಂತಹ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಪೂರ್ಣಗೊಳಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ದೂ.08535- 295108 ಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

ಸಚಿವ ಪ್ರಿಯಾಂಕ್ ಖರ್ಗೆರಿಂದ ಕೃಷಿ ಉತ್ಪನ್ನಗಳ ರಾಶಿ ಮಾಡುವ ಉನ್ನತೀಕರಿಸಿದ ಯಂತ್ರಗಳ ಲೋಕಾರ್ಪಣೆ



ಕಲಬುರಗಿ,ಜ.12-

ಕೃಷಿ ಉತ್ಪನ್ನಗಳನ್ನು ರಾಶಿ ಮಾಡುವ ಈಗಿನ ಪಂಜಾಬ್ ಕಂಬೈನ್ ಹಾರ್ವೆಸ್ಟರ ಯಂತ್ರಗಳು ಸಂಪೂರ್ಣವಾಗಿ ನೂರಕ್ಕೆ ನೂರರಷ್ಟು ಶುದ್ಧವಾಗಿ ರಾಶಿ ಮಾಡುತ್ತಿಲ್ಲ ಎಂಬ ಕೊರಗು ನಿವಾರಿಸುವ ನಿಟ್ಟಿನಲ್ಲಿ ಉನ್ನತಿಕರಿಸಿದ ಕೃಷಿ ಯಂತ್ರೋ ಪಕರಣಗಳನ್ನು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಇಂದು ಲೋಕಾರ್ಪಣೆ ಗೊಳಿಸಿದರು.

ಕಲಬುರಗಿ ನಗರದ ಡಾ.ಎಸ್.ಎಂ.ಪಂಡಿತ ರಂಗ ಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ 11 ಯಂತ್ರಗಳನ್ನು ರೈತರ ಅನುಕೂಕ್ಕಾಗಿ ಲೋಕಾರ್ಪಣೆ ಗೊಳಿಸಿದರು.

ಜಿಲ್ಲೆಯ ಎಫ್.ಪಿ.ಓ ಕೇಂದ್ರದ ಮೂಲಕ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮ್ಯಾಕ್ರೋ ಯೋಜನೆಯಡಿಯಲ್ಲಿ ಕೃಷಿ ಉತ್ಪನ್ನಗಳನ್ನು ಪ್ರಾಥಮಿಕವಾಗಿ ಕ್ಲೀನಿಂಗ್, ಗ್ರೇಡಿಂಗ್ ಹಾಗೂ ಪ್ಯಾಕಿಂಗ್ ಮಾಡಲು ಈಗಾಗಲೆ ಜಿಲ್ಲೆಯಾದ್ಯಂತ 11 ಯಂತ್ರೋಪಕರಣ ಬಾಡಿಗೆ ಕೇಂದ್ರಗಳನ್ನು ತೆರೆಯಲಾಗಿದ್ದು, ಈ ಕೇಂದ್ರದ ಮೂಲಕ ಈ ಎಲ್ಲಾ ಯಂತ್ರಗಳನ್ನು ರೈತರು ಬಾಡಿಗೆ ಮೂಲಕ ಪಡೆಯಬಹುದಾಗಿದೆ. ಇದಕ್ಕಾಗಿ ಸರ್ಕಾರ 5.50 ಕೋಟಿ ರೂ. ವ್ಯಯ ಮಾಡಿದೆ.

ಕೇಂದಗಳು ಎಲ್ಲೆಲ್ಲಿ? : ಅಫಜಲಪುರ ತಾಲೂಕಿನ ಅಫಜಲಪುರ, ಅತನೂರ, ಕಲಬುರಗಿ ತಾಲ್ಲೂಕಿನಲ್ಲಿ ಕಲಬುರಗಿ, ಸೇಡಂ ತಾಲೂಕಿನ ಸೇಡಂ ಪಟ್ಟಣ ಹಾಗೂ ಕೋಡ್ಲಾ ದಲ್ಲಿ, ಚಿತ್ತಾಪುರ ತಾಲೂಕಿನ ಚಿತ್ತಾ ಪುರ ಪಟ್ಟಣ, ಗುಂಡಗುರ್ತಿ, ಅಲ್ಲೂರ ಬಿ, ಡಿಗ್ಗಾಂವ, ಹೆಬ್ಬಾಳ ಹಾಗೂ ರಾವೂರ ಗ್ರಾಮದಲ್ಲಿ ಕೇಂದ್ರಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ.

ಈ ಮುಂಚೆ ಯಂತ್ರಗಳಿಂದ ರಾಶಿ ಮಾಡಲಾಗಿದ್ದರೂ ಸಮರ್ಪಕವಾಗಿ ಸಂಸ್ಕರಣೆಯಾಗುತ್ತಿರಲಿಲ್ಲ. ಹೀಗಾಗಿ ಸರಿಯಾದ ಬೆಲೆ ಸಿಗುತ್ತಿರಲಿಲ್ಲ. ಆದರೆ ಉನ್ನತೀಕರಿಸಿದ ಯಂತ್ರಗಳಿಂದ ಸಂಪೂರ್ಣ ಕ್ಲಿನಿಂಗ್, ಗ್ರೇಡಿಂಗ್ ಮತ್ತು ಪ್ಯಾಕಿಂಗ್ ಆಗುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಈ ಸಂದರ್ಭದಲ್ಲಿ ತಿಳಿಸಿದರು.

ವಿಕಲಚೇತನರಿಗೆ ಮಷಿನ್ ವಿತರಣೆ: ಇದೇ ಸಂದರ್ಭದಲ್ಲಿ ಕೃಷಿಯಲ್ಲಿ ಸ್ವಯಂ ಉದ್ಯೋಗದ ಮೂಲಕ ಆದಾಯ ಗಳಿಸಲು 2024-25ನೇ ಸಾಲಿನ ಜಿಲ್ಲಾ ಖನಿಜ ಪ್ರತಿಷ್ಠಾನ ಯೋಜನೆ ಅಡಿಯಲ್ಲಿ ಶಾಸಕ ಅಲ್ಲಮಪ್ರಭು ಪಾಟೀಲ್ ಅವರ ಅನುದಾನದಡಿಯಲ್ಲಿ ತಲಾ 5 ಲಕ್ಷ ರೂ. ವೆಚ್ಚದಲ್ಲಿ ಕಲಬುರಗಿ ತಾಲೂಕಿನ ಕೆರಿಭೋಸಗಾ ಗ್ರಾಮದ ವಿಠಲ್ ಭಿಮಶಾ ಪೂಜಾರಿ, ಭೀಮಳ್ಳಿ ಗ್ರಾಮದ ಸಂತೋಷ ಗಣಪತಿ ಎಂಬುವ ವಿಕಲಚೇತನರಿಗೆ ಕೃಷಿ ಯಂತ್ರೋಪಕರಣಗಳಾದ ರಾಶಿ ಮಷಿನ್ ರೋಟವೇಟರ ಯಂತ್ರೋಪಕರಣಗಳನ್ನು ವಿತರಿಸಲಾಯಿತು.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಲಶ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ, ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಕಲಬುರಗಿ ಉತ್ತರ ಶಾಸಕರಾದ ಕನೀಜ್ ಫಾತಿಮಾ, ಕಲಬುರಗಿ ದಕ್ಷಿಣ ಶಾಸಕ ಅಲ್ಲಮ ಪ್ರಭು ಪಾಟೀ ಲ್, ಎಂ.ವೈ.ಪಾಟೀಲ, ವಿಧಾನ ಪರಿಷತ್ ಶಾಸಕ ತಿಪ್ಪಣ್ಣಪ್ಪ ಕಮಕನೂರು, ಜಗದೇವ ಗುತ್ತೇ ದಾರ್, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಹರವಾಳ್, ಮೇಯರ್ ವರ್ಷಾ ರಾಜೀವ ಜಾನೆ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ, ಡಿಸಿಬಿ. ಫೌಜಿಯಾ ತರನ್ನವ್, ಜಿ.ಪಂ. ಸಿ.ಇ.ಓ ಭಂವರ್ ಸಿಂಗ್ ಮೀನಾ, ಎಸ್.ಪಿ. ಅಡ್ಡೂರು ಶ್ರೀನಿವಾಸಲು ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.



ಗಂಗಾವತಿ:ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಅವರ ಹುಟ್ಟುಹಬ್ಬದ ಅಂಗವಾಗಿ ಬಳ್ಳಾರಿಯ ಗ್ರಾಮದೇವತೆ ಶ್ರೀ ಕನಕ ದುರ್ಗಮ್ಮ ದೇವಸ್ಥಾನದಲ್ಲಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಹಾಗು ಪತ್ನಿ ಲಕ್ಷ್ಮೀ ಅರುಣಾ ರೆಡ್ಡಿ ಅವರು ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ಮಾಜಿ ಸಚಿವರಾದ ಬಿ.ಶ್ರೀರಾಮುಲು ಉಪಸ್ಥಿತರಿದ್ದರು.

ಸಿಬಿಎಸ್ ಬ್ಯಾಂಕ್ ಮೂರನೇ ಬಾರಿಗೆ ಹ್ಯಾಟ್ರಿಕ್ ಅಧ್ಯಕ್ಷರಾಗಿ ಗಿರಿಯಪ್ಪ ಹೊಸಕೇರಿ ಅವಿರೋಧ ಆಯ್ಕೆ

ಗಂಗಾವತಿ,ಜ.12-

ಇಲ್ಲಿಯ ಶ್ರೀಚೆನ್ನಬಸವಸ್ವಾಮಿ ಸೌಹಾರ್ದ ಸಹಕಾರಿ ಬ್ಯಾಂಕ್ ನ ಅದ್ಯಕ್ಷರಾಗಿ ಮೂರನೇ ಬಾರಿಗೆ ಗಿರಿಯಪ್ಪ ಹೊಸಕೇರಿ ಆಯ್ಕೆಯಾಗಿ ಹ್ಯಾಟ್ರಿಕ್ ಸಾಧಿಸಿದ್ದಾರೆ. ಬ್ಯಾಂಕ್‌ನಲ್ಲಿ ಜರುಗಿದ ಅಧ್ಯಕ್ಷರ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಗಿರಿಯಪ್ಪ ಹೊಸಕೇರಿ ಮತ್ತು ಉಪಾದ್ಯಕ್ಷರಾಗಿ ಅರಳಿ ಶೇಖರಪ್ಪ ಅವಿರೋಧವಾಗಿ ಆಯ್ಕೆಯಾದರು. ಸೆ.28 ರಂದು ಜರುಗಿದ ಚುನಾವಣೆಯಲ್ಲಿ 12 ನಿರ್ದೇಶಕರು ಆಯ್ಕೆ ನಡೆದಿತ್ತು.

ಅಧ್ಯಕ್ಷ - ಉಪಾಧ್ಯಕ್ಷರ ಚುನಾವಣೆಯಲ್ಲಿ ಒಬ್ಬಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಸಹಕಾರಿ ಇಲಾಖೆಯ ಅಭಿವೃದ್ದಿ ಅಧಿಕಾರಿಯು ಆಗಿರುವ ಚುನಾವಣಾಧಿಕಾರಿ ಶಿವಾಜಿ ಅವರು ಘೋಷಿಸಿ ದರು.

ಈ ವೇಳೆ ಮಾಜಿ ಶಾಸಕ ಹಾಗು ಬ್ಯಾಂಕ್ ನ ನಿರ್ದೇಶಕರಾಗಿರುವ ಪರಣ್ಣ ಮುನವಳ್ಳಿ, ಉದ್ಯಮಿ ಕೆ.ಕಾಳಪ್ಪ, ರಾಚಪ್ಪ ಸಿದ್ದಾಪುರ, ರಮೇಶ ಗೌಳಿ, ಬಸವರಾಜ ವೀರಶೆಟ್ಟಿ, ಸುಜಾ ತ ಅಂಗಡಿ, ಲತಾ ಶರಣೇಗೌಡ, ತಿಮ್ಮಣ್ಣ ಮೇಧಾರ್ ಉಪಸ್ಥಿತರಿದ್ದು, ಬೆಂಬಲಿಸಿದರು.

ಬ್ಯಾಂಕ್ ನ ಪ್ರಗತಿಗೆ ಶ್ರಮಿಸುವೇಃ ನಗರದ ಆರಾಧ್ಯ ದೇವರಾಗಿರುವ ಶ್ರೀಚೆನ್ನಬಸವ, ಸ್ವಾಮಿ ಹೆಸರಿನಲ್ಲಿ ಬ್ಯಾಂಕ್ ಮುನ್ನಡಿದಿದೆ ಇದಕ್ಕೆ ಕಾರಣ ಎಲ್ಲಾ ನಿರ್ದೇಶಕರು ಮತ್ತು ಷೇರುದಾರರ ಸಹಕಾರವೆ ಕಾರಣ ವಾಗಿದೆ ಎಂದರು.

ತಾವು ಮೂರು ಭಾರಿ ಅದ್ಯಕ್ಷರನ್ನಾಗಿ ಆಯ್ಕೆ ಮಾಡ ಲು ನಿರ್ದೇಶಕರ ಸಹಕಾರ ಕಾರಣ ಎಂದ ಅವರು ಬ್ಯಾಂಕ್ ನಿಂದ ಗ್ರಾಹ ಕರಿಗೆ ಉತ್ತಮ ಸೇವೆ ನೀಡುತ್ತಿದ್ದೇವೆ. ಜೊತೆಗೆ ಬಳ್ಳಾರಿ ಜಿಲ್ಲೆಯ ಕಂಪ್ಲಿ ಮತ್ತು ಕಾರಟಗಿ ನಗರದಲ್ಲಿ ಶಾಖೆಗಳನ್ನು ಪ್ರಾರಂಭಿಸಲಾಗಿದೆ. ಬರುವ ದಿನಗಳಲ್ಲಿ ಕೊಪ್ಪಳದಲ್ಲಿ ಶಾಖೆ ಪ್ರಾರಂಭಿಸಲಾಗುತ್ತದೆ ಎಂದರು. ಬ್ಯಾಂಕ್ ನ ಸಿಬ್ಬಂದಿಗಳು ಸಹ ಗ್ರಾಹಕರಿಗೆ ಉತ್ತಮ ಸೇವೆ ಕಲ್ಪಿಸುತ್ತಿದ್ದಾರೆಂದು ಹೇಳಿದರು.

ಮನೆ ನಿರ್ಮಾಣ ಸ್ಥಳದಲ್ಲಿ ನಿಧಿ ಪತ್ತೆ: ತಮಗೂ ಚಿನ್ನ ನೀಡುವಂತೆ ಎಎಸ್ಐ ಕುಟುಂಬದ ಬೇಡಿಕೆ

ಗದಗ: ಶನಿವಾರ ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ಮನೆ ನಿರ್ಮಾಣ ನಡೆಯುತ್ತಿದ್ದ ಸ್ಥಳದಲ್ಲಿ ನಿಧಿ ಪತ್ತೆಯಾಗಿದ್ದು, ಕುಟುಂಬದವರು ಚಿನ್ನದ ಆಭರಣಗಳನ್ನು ಇಟ್ಟಿದ್ದ ತಾಮ್ರದ ಪಾತ್ರೆಯನ್ನು ಎಎಸ್ಐ ಅಧಿಕಾರಿಗಳಿಗೆ ಹಸ್ತಾಂತರಿಸಿದರು.

ನಿರ್ಮಾಣ ಸ್ಥಳದಲ್ಲಿ ನಿಧಿ ಪತ್ತೆಯಾದ ಕೂಡಲೇ, ಕುಟುಂಬದ ಎಂಟನೇ ತರಗತಿಯ ವಿದ್ಯಾರ್ಥಿ ಪ್ರಜ್ವಲ್ ಗ್ರಾಮದ ಕಡೆಗೆ ಓಡಿಹೋಗಿ ತಮಗೆ ಚಿನ್ನ ಸಿಕ್ಕಿರುವುದಾಗಿ ಘೋಷಿಸಿದರು. ನಂತರ ಗ್ರಾಮಸ್ಥರು ಗ್ರಾಮ ಪಂಚಾಯತ್, ಪೊಲೀಸ್, ಎಎಸ್ಐ ಮತ್ತು ಜಿಲ್ಲಾಡಳಿತ ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ಕುಟುಂಬಕ್ಕೆ ಚಿನ್ನ ಸಿಕ್ಕಿದೆ ಎಂಬ ಮಾಹಿತಿ ಪಡೆದ ಗದಗ ಎಸ್ಪಿ ಹಾಗೂ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಎಎಸ್ಐ), ಜಿಲ್ಲಾಡಳಿತ ಮತ್ತು ಗ್ರಾಮ ಪಂಚಾಯತ್ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿದರು. ಲಕ್ಕುಂಡಿಗೆ ಭೇಟಿ ನೀಡಿದ ಧಾರವಾಡದ ಎಎಸ್ಐ ಅಧಿಕಾರಿಯೊಬ್ಬರು, 466 ಗ್ರಾಂ ತೂಕದ ಚಿನ್ನದ ಆಭರಣಗಳನ್ನು ಮತ್ತಷ್ಟು ಪರಿಶೀಲಿಸಿದರು. ಗಮನಾರ್ಹ ಐತಿಹಾಸಿಕ ಮೌಲ್ಯವನ್ನು ಹೊಂದಿಲ್ಲ ಎಂದು ಹೇಳಿದರು, ಇದಕ್ಕಾಗಿ ಕುಟುಂಬವು ಅದನ್ನು ಮರಳಿ ನೀಡುವಂತೆ ಒತ್ತಾಯಿಸಿದೆ.

ಸೋಮನಾಥ ದೇವಾಲಯ ಪುನರ್ನಿರ್ಮಾಣ ವಿರೋಧಿಸಿದವರು ಇನ್ನೂ ಸಕ್ರಿಯ, ಅವರನ್ನು ಸೋಲಿಸಲು ಜಾಗರೂಕರಾಗಿರಬೇಕು: ಪ್ರಧಾನಿ ಮೋದಿ

ಸೋಮನಾಥ (ಗುಜರಾತ್), ಜ.11-

ಸ್ವಾತಂತ್ರ್ಯದ ನಂತರ ಇಲ್ಲಿನ ಸೋಮನಾಥ ದೇವಾಲಯ ಪುನರ್ನಿರ್ಮಾಣ ಕಾರ್ಯವನ್ನು ವಿರೋಧಿಸಿದ ಶಕ್ತಿಗಳು ಇನ್ನೂ ಸಕ್ರಿಯವಾಗಿವೆ. ಭಾರತವು ಅವರನ್ನು ಸೋಲಿಸಲು ಜಾಗರೂಕರಾಗಿ ರಬೇಕು, ಒಗ್ಗಟ್ಟಾಗಿರಬೇಕು ಮತ್ತು ಶಕ್ತಿಶಾಲಿಯಾಗಿರಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದರು.

ಕ್ರಿ.ಶ. 1026 ರಲ್ಲಿ ಘಜ್ನಿ ಮಹಮ್ಮದ್ ಸೋಮನಾಥ ದೇವಾಲಯದ ಮೇಲೆ ಆಕ್ರಮಣ ಮಾಡಿದ್ದಕ್ಕೆ 1000 ವರ್ಷ ಕಳೆದ ಹಿನ್ನೆಲೆ ಭಾನುವಾರ ನಡೆದ ಸೋಮನಾಥ ಸ್ವಾಭಿಮಾನ್ ಪರ್ವ್‌ನಲ್ಲಿ ಮಾತನಾಡಿದ ಅವರು, ಸೋಮನಾಥದ ಇತಿಹಾಸವು ವಿನಾಶ ಮತ್ತು ಸೋಲಿನದ್ದಲ್ಲ, ಬದಲಾಗಿ ಗೆಲುವು ಮತ್ತು ನವೀಕರಣದ ದ್ದಾಗಿದೆ. ಮೂಲಭೂತವಾದಿ ಆಕ್ರಮಣಕಾರರು ಈಗ ಇತಿಹಾಸದ ಪುಟಗಳಿಗೆ ಸೀಮಿತವಾಗಿರುವ ಕಾಲಚಕ್ರ ಇದು. ಆದರೆ ಸೋಮನಾಥ ದೇವಾಲಯವು ಇನ್ನೂ ಎತ್ತರವಾಗಿ ನಿಂತಿದೆ ಎಂದರು.

1026 ರಲ್ಲಿ ಸೋಮನಾಥ ದೇವಾಲಯದ ಮೇಲೆ ದಾಳಿ ಮಾಡಿದ ಮೊದಲ ವ್ಯಕ್ತಿ ಘಜ್ನಿ ಮಹಮ್ಮದ್. ಆತ ಸೋಮನಾಥವನ್ನು ಕುಗ್ಗಿಸಿದ್ದೇವೆ ಎಂದು ಭಾವಿಸಿದ್ದ. ಆದರೆ ವರ್ಷಗಳಲ್ಲಿ ಅದನ್ನು ಪುನರ್ ನಿರ್ಮಾಣ ಮಾಡಲಾಯಿತು. 12ನೇ ಶತಮಾನದಲ್ಲಿ, ರಾಜ ಕುಮಾರ್ಪಾಲ್ ಭವ್ಯವಾದ ದೇವಾ ಲಯವನ್ನು ನಿರ್ಮಿಸಿದರು ಎಂದು ತಿಳಿಸಿದರು.

13 ನೇ ಶತಮಾನದಲ್ಲಿ, ಅಲ್ಲಾವುದ್ದೀನ್ ಖಿಲ್ಜಿ ಸೋಮನಾಥದ ಮೇಲೆ ದಾಳಿ ಮಾಡಿದ. 14ನೇ ಶತಮಾನದ ಆರಂಭದಲ್ಲಿ, ಜುನಾಗಢ್ ರಾಜ ಅದನ್ನು ಪುನರ್ ನಿರ್ಮಿಸಿದರು. ನಂತರ 14ನೇ ಶತಮಾನದ ಆರಂಭದಲ್ಲಿ, ಮುಜಫರ್ ಖಾನ್ ಸೋಮನಾಥದ ಮೇಲೆ ದಾಳಿ ಮಾಡಿದನು,

ನಿಮ್ಮೂರು ಸುದ್ದಿ

ಸಂಪಾದಕೀಯ

ಟ್ರಂಪ್ ವಿರುದ್ಧ ಇನ್ನಾದರೂ ಎದೆ ಸೆಟೆಸುವರೇ ಮೋದಿ?



ಟ್ರಂಪ್ ಕಾರ್ಯ ವಿಧಾನ ಮತ್ತು ಶೈಲಿಯನ್ನು ಮೋದಿ ತಿಳಿದುಕೊಂಡಿದ್ದರೆ, ರಿಚರ್ಡ್ ನಿಕ್ಸ ನ್ ಅವರನ್ನು ಇಂದಿರಾ ಗಾಂಧಿ ಎದುರಿಸಿದಂತೆ ಮೋದಿ ಕೂಡ ಟ್ರಂಪ್‌ರನ್ನು ಎದುರಿಸಬೇಕು. ಆದರೆ, ಈ ಪರಿಸ್ಥಿತಿಯಲ್ಲಿ ಟ್ರಂಪ್ ವಿರುದ್ಧ ನಿಲ್ಲುವ ಧೈರ್ಯ ಮೋದಿಗಿದೆಯೇ?

ಒಬ್ಬ- ಅಂತಾರಾಷ್ಟ್ರೀಯ ಪ್ರವಾಸಿಗ, ಪುಕ್ಕಟ್ಟೆ ಪ್ರಚಾರ ಪಡೆಯುವಾತ, ದೇಶದಲ್ಲಿ ತಾನೇ ಸಾರ್ವಭೌಮನೆಂದು ಬೊಬ್ಬೆಹೊಡೆಯುವಾತ. ಮತ್ತೊಬ್ಬ ಜಗತ್ತಿಗೆ ತಾನೇ ಅತಿ ಶ್ರೇಷ್ಠ, ತನ್ನ ಅಣತಿಯಲ್ಲೇ ಎಲ್ಲವೂ ಇದೆ/ಇರಬೇಕು, ತಾನು ಹೇಳಿದ್ದೇ ಆಗಬೇಕು, ಎಲ್ಲರೂ ತನ್ನ ಮಾತನ್ನು ಶಿರಸಾ ಪಾಲಿಸಬೇಕು ಎನ್ನುವಾತ. ಈ ಇಬ್ಬರದ್ದೂ ಒಂದು ಕಾಲದಲ್ಲಿ ಭಲೇ ಜೋಡಿ, ನಾವಿಬ್ಬರೂ, ನಮ್ಮದೇ ಎಲ್ಲವೂ ಎಂಬ ಧೋರಣೆ ಹೊಂದಿದ್ದರು. ಈಗ ಈ ಜೋಡಿಯಲ್ಲಿ ಒಬ್ಬರು ಮತ್ತೊಬ್ಬರ ಬಲೆಗೆ ಬಿದ್ದು, ಹೊರಬರಲಾರದೆ ತಿಣುಕಾಡುತ್ತಿದ್ದಾರೆ. ಇದು ಮೋದಿ-ಟ್ರಂಪ್ ಜೋಡಿಯ ಕಥೆ-ವ್ಯಥೆ.

ಟ್ರಂಪ್ ಎರಡನೇ ಬಾರಿಗೆ ಅಮೆರಿಕ ಅಧ್ಯಕ್ಷರಾದ ಬಳಿಕ, ಭಾರತದ ವಿರುದ್ಧ ನಿರಂತರ ಕಿಡಿಕಾರುತ್ತಲೇ ಇದ್ದಾರೆ. ಪ್ರಧಾನಿ ಮೋದಿ ಅವರನ್ನು ಅವಮಾನಿಸುತ್ತಲೇ ಬಂದಿದ್ದಾರೆ. ಮೊದಲಿಗೆ, ಭಾರತದ ಮೇಲಿನ ಸುಂಕವನ್ನು 25%ಗೆ ಟ್ರಂಪ್ ಏರಿಸಿದರು. ಬಳಿಕ, ರಷ್ಯಾದಿಂದ ಕಚ್ಚಾ ತೈಲವನ್ನು ಖರೀದಿಸದಂತೆ ತಾಕೀತು ಮಾಡಿದರು. ಭಾರತ ಬಗ್ಗದಿದ್ದಾಗ, 50% ತೆರಿಗೆ ಹೇರಿದರು. ಈಗ, 500% ಸುಂಕ ವಿಧಿಸುವ ಮಸೂದೆಯನ್ನು ರೂಪಿಸಿದ್ದಾರೆ. ಇದೆಲ್ಲವೂ ಸಂಭವಿಸಿದ್ದು, ವಿದೇಶಾಂಗ ನೀತಿಯ ಕಾರಣಕ್ಕಲ್ಲ, ಟ್ರಂಪ್ ಈಗೋವನ್ನು ಮೋದಿ ತಣಿಸಲಿಲ್ಲ ಎಂಬ ಏಕೈಕ ಕಾರಣಕ್ಕೆ ಎಂಬುದು ಈಗ ಬಟಾಬಯಲಾಗಿದೆ. ಟ್ರಂಪ್‌ಗೆ ಮೋದಿ ವೈಯಕ್ತಿಕವಾಗಿ ಕರೆ ಮಾಡದ ಕಾರಣಕ್ಕೆ, ಭಾರತ-ಅಮೆರಿಕ ನಡುವಿನ ವ್ಯಾಪಾರ ಒಪ್ಪಂದ ರದ್ದಾಗಿದೆ/ಸ್ಥಗಿತಗೊಂಡಿದೆ ಎಂದು ಅಮೆರಿಕಾದ ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಲುಟ್ನಿಕ್ ಸ್ಪಷ್ಟವಾಗಿ ಹೇಳಿದ್ದಾರೆ.

2025ರ ಜೂನ್‌ನಲ್ಲಿ ಭಾರತ-ಅಮೆರಿಕ ನಡುವೆ ಬೈಲ್ಯಾಟರಲ್ ಟ್ರೇಡ್ ಅಗ್ರಿಮೆಂಟ್ (ಟ್ಯಾರಿಫ್ ಒಪ್ಪಂದ) ಮುನ್ನೆಲೆಯಲ್ಲಿತ್ತು. ಒಪ್ಪಂದಕ್ಕಾಗಿ ಉಭಯ ರಾಷ್ಟ್ರಗಳ ನಡುವೆ ದೀರ್ಘಕಾಲದ ಮಾತುಕತೆಗಳನ್ನು ನಡೆದಿದ್ದವು. ಆದರೆ, ಒಪ್ಪಂದವು ಅಂತಿಮಗೊಳ್ಳಲೇ ಇಲ್ಲ. ಕಾರಣ, ಮೋದಿ ಅವರು ವೈಯಕ್ತಿಕವಾಗಿ ಟ್ರಂಪ್‌ಗೆ ಕರೆ ಮಾಡದೆ ಇರುವುದೇ ಕಾರಣವೆಂದು ಅಮೆರಿಕಾದ ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಲುಟ್ನಿಕ್ ಹೇಳಿದ್ದಾರೆ.

ಜನವರಿ 9ರಂದು ಕಾರ್ಯಕ್ರಮವೊಂದರಲ್ಲಿ ಭಾರತ-ಅಮೆರಿಕ ಟ್ಯಾರಿಫ್ ಒಪ್ಪಂದದ ಕುರಿತು ಲುಟ್ನಿಕ್ ವಿವರಿಸಿದರು. ''ಭಾರತ ಮತ್ತು ಅಮೆರಿಕ ನಡುವಿನ ವ್ಯಾಪಾರ ಒಪ್ಪಂದವು ದೀರ್ಘಕಾಲದಿಂದ ಬಾಕಿ ಉಳಿದಿದೆ. ಇದು ಒಪ್ಪಂದದಲ್ಲಿನ ಭಿನ್ನಾಭಿಪ್ರಾಯಗಳ ಕಾರಣಕ್ಕೆ ಅಲ್ಲ, ಬದಲಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಟ್ರಂಪ್ ಅವರೊಂದಿಗೆ ನೇರವಾಗಿ ಮಾತನಾಡಲು ನಿರಾಕರಿಸಿದ್ದರಿಂದ ಒಪ್ಪಂದ ಕಾರ್ಯರೂಪಕ್ಕೆ ಬರಲಿಲ್ಲ'' ಎಂದಿದ್ದಾರೆ.

''ಟ್ರಂಪ್‌ಗೆ ಮೋದಿ ಕರೆ ಮಾಡಬೇಕಾಗಿತ್ತು. ಮಾತುಕತೆಗಳನ್ನು ಅಂತಿಮಗೊಳಿಸಲು ಭಾರತಕ್ಕೆ ಸ್ಪಷ್ಟವಾಗಿ ಮೂರು ಶುಕ್ರವಾರಗಳ ಸಮಯ ನೀಡಲಾಗಿತ್ತು. ನಾವು ಯುಕೆಗೆ ಎರಡು ಶುಕ್ರವಾರಗಳ ಗಡುವು ನೀಡಿದ್ದೆವು. ಯುಕೆ ಪ್ರಧಾನಿ ಕೀರ್ ಸ್ಟಾರ್ಮರ್ ಅವರು ಟ್ರಂಪ್‌ಗೆ ನೇರವಾಗಿ ಕರೆ ಮಾಡಿದರು. ಮಾತುಕತೆಗಳು ಮುಕ್ತಾಯಗೊಂಡವು. ಒಪ್ಪಂದವನ್ನು ಘೋಷಿಸಲಾಯಿತು. ಆದರೆ, ಮೋದಿ ಕರೆ ಮಾಡಲೇ ಇಲ್ಲ. ಪರಿಣಾಮ, ನಾವು ಇಂಡೋನೇಷ್ಯಾ, ಫಿಲಿಪೈನ್ಸ್ ಹಾಗೂ ವಿಯೆಟ್ನಾಂ ಜೊತೆ ವ್ಯಾಪಾರ ಒಪ್ಪಂದಗಳನ್ನು ಮಾಡಿಕೊಂಡೆವು. ಈ ಎಲ್ಲ ರಾಷ್ಟ್ರಗಳಿಗಿಂತ ಮೊದಲ ಆದ್ಯತೆಯನ್ನು ನಾವು ಭಾರತಕ್ಕೆ ನೀಡಿದ್ದೆವು'' ಎಂದು ಹೇಳಿದ್ದಾರೆ.

ಲುಟ್ನಿಕ್ ಹೇಳಿಕೆಗಳು ಬರುವುದಕ್ಕೂ ಮುಂಚೆ, ಈ ಒಪ್ಪಂದ ಸ್ಥಗಿತದ ಕುರಿತು ಭಾರತೀಯರ ಭಾವನೆ ಬೇರೆಯೇ ಇತ್ತು. ಭಾರತದಲ್ಲಿನ ಕೃಷಿ ಮಾರುಕಟ್ಟೆಗೆ ಅಮೆರಿಕ ಬೃಹತ್ ಪ್ರಮಾಣದಲ್ಲಿ ಪ್ರವೇಶಿಸಲು ಯತ್ನಿಸುತ್ತಿದೆ. ಅಮೆರಿಕಗೆ ಪ್ರವೇಶ ನೀಡಲು ಭಾರತ ಸಿದ್ಧವಾಗಿಲ್ಲ. ಆ ಕಾರಣಕ್ಕಾಗಿಯೇ, ಈ ಒಪ್ಪಂದ ಸ್ಥಗಿತಗೊಂಡಿದೆ ಎಂದು ಭಾವಿಸಲಾಗಿತ್ತು. ಆದರೆ, ಮೋದಿ ಅವರು ಟ್ರಂಪ್ ಅವರ ಈಗೋಗೆ ನೀರೆರೆಯದ ಕಾರಣಕ್ಕೆ, ಒಪ್ಪಂದ ಪ್ರಸ್ತಾಪದಲ್ಲಿಯೇ ಕೊನೆಗೊಂಡಿದೆ ಎಂಬುದು ಈಗ ಬಹಿರಂಗವಾಗಿದೆ.

ಈ ಮೋದಿ-ಟ್ರಂಪ್ ಸ್ನೇಹ ಟ್ರಂಪ್ ಮೊದಲ ಅವಧಿಗೆ ಅಮೆರಿಕ ಅಧ್ಯಕ್ಷರಾಗಿದ್ದಾಗ, ಆಪ್ತಮಿತ್ರರಂತಿತ್ತು. ಆದರೆ, ಎರಡನೇ ಅವಧಿಗೆ ಟ್ರಂಪ್ ಅಧ್ಯಕ್ಷರಾಗುತ್ತಲೇ, ಈ ಇಬ್ಬರ ಸ್ನೇಹ ಹಳಸಿದ ಹಿಟ್ಟಾಗಿದೆ. ಟ್ರಂಪ್ ಯಾರಾದರೂ ತಮಗೆ ಕರೆ ಮಾಡದಿದ್ದರೆ ಅಥವಾ ತಮ್ಮ ಕರೆಗೆ ತ್ವರಿತವಾಗಿ ಉತ್ತರಿಸದಿದ್ದರೆ, ಆ ರಾಷ್ಟ್ರಗಳೊಂದಿಗೆ ವ್ಯಾಪಾರ ಒಪ್ಪಂದಗಳು, ಕಾರ್ಯತಂತ್ರದ ಸಂಬಂಧಗಳನ್ನೇ ತೊರೆಯುವಷ್ಟು ಅಹಂಕಾರಿಯಾಗಿದ್ದಾರೆ.

ಈ ಅಹಂಕಾರಿ ಟ್ರಂಪ್ ಮತ್ತು ಸ್ವ-ಘೋಷಿತ ವಿಶ್ವಗುರು ಮೋದಿ ಅವರ ಸ್ನೇಹದ ಮೊದಲ ಇಟ್ಟಿಗೆ ಕಳಚಿ ಬಿದ್ದದ್ದೇ, 2024ರ ಅಧ್ಯಕ್ಷೀಯ ಚುನಾವಣೆಯ ಸಮಯದಲ್ಲಿ. ಆಗ ತಮ್ಮ ಪರವಾಗಿ ಮೋದಿ ಪ್ರಚಾರಕ್ಕೆ ಬರುತ್ತಾರೆಂದು ಟ್ರಂಪ್ ಬಡಾಯಿ ಕೊಚ್ಚಿಕೊಂಡಿದ್ದರು. ಆದರೆ, ಅಮೆರಿಕಗೆ ಭೇಟಿ ನೀಡಿದ್ದ ಮೋದಿ, ಟ್ರಂಪ್ ಎಡೆಗೆ ಸುಳಿಯಲೂ ಇಲ್ಲ. ಮೊದಲ ಬಾರಿಗೆ ಟ್ರಂಪ್ ಈಗೋವನ್ನು ಮೋದಿ ಕೆಣಕಿದಂತಾಯಿತು.

ಭಾರತ-ಪಾಕ್ ಯುದ್ಧವನ್ನು ತಾನೇ ನಿಲ್ಲಿಸಿದೆನೆಂದು ಟ್ರಂಪ್ ಪದೇ-ಪದೇ ಹೇಳಿಕೊಳ್ಳುತ್ತಿದ್ದಾರೆ. ಅವರ ಹೇಳಿಕೆಯನ್ನು ಪಾಕಿಸ್ತಾನ ಸಮ್ಮತಿಸಿದರೆ, ಭಾರತ ನಿರಾಕರಿಸಿತು. ಮೋದಿ ಅವರಂತೂ ತುಟಿ ಬಿಚ್ಚಲೇ ಇಲ್ಲ. ಜೊತೆಗೆ, ಟ್ರಂಪ್‌ಗೆ ನೊಬೆಲ್ ಶಾಂತಿ ಪ್ರಶಸ್ತಿ ನೀಡಬೇಕೆಂದು ಪಾಕ್ ಪ್ರಸ್ತಾಪಿಸಿತು. ಭಾರತವೂ ಪ್ರಸ್ತಾಪ ಇಡುತ್ತದೆಂದು ಟ್ರಂಪ್ ನಿರೀಕ್ಷಿಸಿದ್ದರು. ಆದರೆ, ಅದಾಗಲಿಲ್ಲ. ಮತ್ತೆ ಟ್ರಂಪ್ ಈಗೋಗೆ ಘಾಸಿಯಾಯಿತು.

ಮುಂದುವರೆದು, ಅಮೆರಿಕ ಮೇಲಿನ ಸುಂಕವನ್ನು ಕಡಿಮೆ (ಶೂನ್ಯ) ಮಾಡಬೇಕೆಂದು ಟ್ರಂಪ್ ಬಯಸಿದ್ದರು. ಆದರೆ, ಭಾರತವು ಸರಾಸರಿ 10-12% ತೆರಿಗೆಯನ್ನು ಮುಂದುವರೆಸಿದೆ. ಇದರಿಂದ, ಕುಪಿತಗೊಂಡ ಟ್ರಂಪ್, ಭಾರತದ ಮೇಲೆ 25% ಸುಂಕ ಹೇರಿದರು. ಭಾರತ ಜಗ್ಗಲಿಲ್ಲ! ಮುಖ್ಯವಾಗಿ, ಖಂಡಿಸಲೂ ಇಲ್ಲ.

ಉಕ್ರೇನ್-ರಷ್ಯಾ ಸಂಘರ್ಷದಲ್ಲಿ ರಷ್ಯಾ ವಿರುದ್ಧ ನಿಲುವು ತೆಗೆದುಕೊಳ್ಳಬೇಕು, ರಷ್ಯಾ ಜೊತೆಗಿನ ವ್ಯಾಪಾರ ಸಂಬಂಧವನ್ನು ಸ್ಥಗಿತಗೊಳಿಸಬೇಕು, ರಷ್ಯಾ ಮೇಲೆ ಆರ್ಥಿಕ ನಿರ್ಬಂಧ ಹೇರಬೇಕೆಂದು ಟ್ರಂಪ್ ಭಾರತವನ್ನು ಒತ್ತಾಯಿಸಿದರು. ಆದರೆ, ಟ್ರಂಪ್ ಮಾತನ್ನು ಮೋದಿ ಕೇಳಲಿಲ್ಲ. ಬದಲಾಗಿ, ಸಸ್ತಾ ಬೆಲೆಗೆ ಕಚ್ಚಾ ತೈಲವನ್ನು ಖರೀದಿಸಿ, ಅದನ್ನು ಇತರ ರಾಷ್ಟ್ರಗಳಿಗೆ ಮಾರಾಟ ಮಾಡಲಾರಂಭಿಸಿತು.

ಭಾರತದ ಈ ನಡೆ, ಟ್ರಂಪ್ ಅವರನ್ನು ಮತ್ತಷ್ಟು-ಮಗದಷ್ಟು ಕ್ರುದ್ಧರನ್ನಾಗಿಸಿತು. ಪರಿಣಾಮ, 25% ಇದ್ದ ಸುಂಕಕ್ಕೆ 25% ದಂಡವೆಂದು 50%ಗೆ ಹೆಚ್ಚಿಸಿದರು. ಇದೇ ಸಂದರ್ಭದಲ್ಲಿ, ಮೋದಿ ಅವರಿಗೆ ಟ್ರಂಪ್ 4 ಬಾರಿ ಕರೆಮಾಡಿದ್ದಾಗಿಯೂ, ಮೋದಿ ಪ್ರತಿಕ್ರಿಯಿಸಲಿಲ್ಲವೆಂದೂ ಟ್ರಂಪ್ ಆರೋಪಿಸಿದ್ದಾರೆ.

ಈ ಎಲ್ಲ ಬೆಳವಣಿಗೆಗಳು ನಡೆದಿರುವುದು, ಭಾರತ-ಅಮೆರಿಕ ನಡುವಿನ ದ್ವಿಪಕ್ಷೀಯ ಒಪ್ಪಂದಗಳು, ಸಂಬಂಧಗಳ ಕಾರಣಕ್ಕಾಗಿ ಎಂದು ಈವರೆಗೆ ಭಾವಿಸಲಾಗಿತ್ತು. ಆದರೆ, ಲುಟ್ನಿಕ್ ಅವರ ಹೇಳಿಕೆಯು ಈ ಭಾವನೆಯನ್ನು ಬದಲಿಸಿದೆ. ಈ ಬೆಳವಣಿಗೆಗೆ ಮೂಲ ಕಾರಣ, ಟ್ರಂಪ್-ಮೋದಿಯ ಸ್ನೇಹ ಸಂಬಂಧದಲ್ಲಿ ಬಿರುಕು ಎಂಬುದನ್ನು ಲುಟ್ನಿಕ್ ಅವರ ಮಾತುಗಳು ಸ್ಪಷ್ಟಪಡಿಸಿವೆ. ತಮ್ಮ ವಿರುದ್ಧ ಟ್ರಂಪ್ ಅತಿರೇಖದ ಕಠಿಣ ಧೋರಣೆ ತಡೆಯುವುದಿಲ್ಲವೆಂದು ಭಾವಿಸಿದ್ದ ಮೋದಿ ಈಗ ದಿಗ್ಭ್ರಾಂತರಾಗಿದ್ದಾರೆ. ಟ್ರಂಪ್ ಅವರನ್ನು ಎದುರಿಸಲಾಗದೆ ಅಡಗಿಕೊಂಡಿದ್ದಾರೆ.

ಟ್ರಂಪ್ ತಮ್ಮ ಅಹಂಕಾರವನ್ನು ತಣಿಸಿಕೊಳ್ಳಲು ವ್ಯಾಪಾರ ನೀತಿ ಮತ್ತು ಒಪ್ಪಂದಗಳನ್ನು ಸಾಧನಗಳಾಗಿ ಬಳಸಿಕೊಳ್ಳುತ್ತಾರೆ ಎಂಬ ನಿರೀಕ್ಷೆ ಎಂದಿಗೂ ಇತ್ತು. ಆದರೆ, ಮೋದಿ ಅವರಿಗೆ ಅದರ ಅರಿವು ಇದ್ದಂತಿಲ್ಲ. ಆದ್ದರಿಂದಲೇ, ಅಮೆರಿಕದ ಸುಂಕದ ಹೇರಿಕೆಯನ್ನು ಭಾರತ ಎದುರಿಸುವಂತಾಗಿದೆ. ಸುಂಕದ ಹೊಡೆತಗಳಿಂದ ಭಾರತವು ಮೀನುಗಾರಿಕೆ, ಉಡುಪುಗಳು, ರತ್ನಗಳು ಹಾಗೂ ಆಭರಣಗಳ ಕ್ಷೇತ್ರದಲ್ಲಿ ಸಂಕಷ್ಟಕ್ಕೆ ಸಿಲುಕಿದೆ. ಭಾರತ-ಪಾಕ್ ಸಂಘರ್ಷದ ಬಳಿಕ, ಟ್ರಂಪ್ ಈಗೋಗೆ ನೀರೆರೆದ ಪಾಕಿಸ್ತಾನವು ಅಮೆರಿಕಗೆ ಹತ್ತಿರವಾಗಿದೆ.

ಆದಾಗ್ಯೂ, ಮೋದಿ ಅವರು ಟ್ರಂಪ್‌ಗೆ 8 ಬಾರಿ ಕರೆ ಮಾಡಿದ್ದಾರೆಂದು ಭಾರತದ ವಿದೇಶಾಂಗ ಸಚಿವಾಲಯದ ವಕ್ತಾರ ರಂಧೀರ್ ಜೈಸ್ವಾಲ್ ಹೇಳಿದ್ದಾರೆ. ಬಹುಶಃ ಟ್ರಂಪ್ ಬಯಸಿದ್ದಾಗ ಮೋದಿ ಕರೆ ಮಾಡದೇ, ಮತ್ತಾವುದೋ ಸಮಯದಲ್ಲಿ ಕರೆ ಮಾಡಿದ್ದೂ ಟ್ರಂಪ್ ಅಹಂಕಾರವನ್ನು ತಣಿಸಿಲ್ಲವೆಂದು ಕಾಣುತ್ತದೆ.

ಈಗಲಾದರೂ, ಟ್ರಂಪ್ ಕಾರ್ಯ ವಿಧಾನ ಮತ್ತು ಶೈಲಿಯನ್ನು ಮೋದಿ ತಿಳಿದುಕೊಂಡಿದ್ದರೆ, ರಿಚರ್ಡ್ ನಿಕ್ಸ ನ್ ಅವರನ್ನು ಇಂದಿರಾ ಗಾಂಧಿ ಎದುರಿಸಿದಂತೆ ಮೋದಿ ಕೂಡ ಟ್ರಂಪ್‌ರನ್ನು ಎದುರಿಸಬೇಕು. ಆದರೆ, ಮೋದಿ ಅಷ್ಟು ಧೈರ್ಯ ಮಾಡಲಾರರು. ಜೊತೆಗೆ, ಈ ಹಿಂದೆ ಇಂದಿರಾ ಗಾಂಧಿ ಅವರೊಂದಿಗೆ ಸೋವಿಯತ್ ಒಕ್ಕೂಟ ಬಲವಾಗಿ ನಿಂತಿತ್ತು. ಈಗ, ಮೋದಿ ಅವರು ನೆರೆಯ ಎಲ್ಲ ರಾಷ್ಟ್ರಗಳೊಂದಿಗೆ ವೈರತ್ವ ಕಟ್ಟಿಕೊಂಡಿದ್ದಾರೆ. ಭಾರತ-ಚೀನಾ, ಭಾರತ-ರಷ್ಯಾ ಸಂಬಂಧಗಳೂ ಹೇಳಿಕೊಳ್ಳುವಂತಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಟ್ರಂಪ್ ವಿರುದ್ಧ ನಿಲ್ಲುವ ಧೈರ್ಯ ಮೋದಿ ಅವರಿಗೆ ಬಾರದು. ಆದ್ದರಿಂದ, ಟ್ರಂಪ್ ಜೊತೆ ವ್ಯವಹರಿಸಲು ಜಗತ್ತು ನಾನಾ ಮಾರ್ಗಗಳನ್ನು ಕಂಡುಕೊಳ್ಳುತ್ತಿದೆ. ಅಂತೆಯೇ, ಮೋದಿ ಕೂಡ ಭಾರತಹಿತದ ಮಾರ್ಗವನ್ನು ಹುಡುಕಬೇಕಾಗುತ್ತದೆ. ಆದರೆ ಟ್ರಂಪ್ ಹಗೆಯ ನೀರು ಮೋದಿ ಮೂಗಿನ ಮಟ್ಟ ದಾಟಿ ಮೇಲೆ ಬಂದಂತಿದೆ!

ಚುನಾವಣಾ ಆಯೋಗ ಮತ್ತು ಬಿಜೆಪಿ ವಿರುದ್ಧ ನೇರವಾಗಿ ಅಖಾಡಕ್ಕಿಳಿದ ಮಮತಾ ಬ್ಯಾನರ್ಜಿ



ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಶನಿವಾರ (ಜ.10) ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರಿಗೆ ಪತ್ರ ಬರೆದಿದ್ದು, ''ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆ)ರ್ ದಾಖಲೆಗಳನ್ನು ಸರಿಪಡಿಸುವ ಬದಲು ಮತದಾರರನ್ನು ಹೊರಗಿಡುವ ಒಂದು ಕಸರತ್ತಾಗಿ ಪರಿವರ್ತಿಸಲಾಗಿದೆ'' ಎಂದು ಆರೋಪಿಸಿದ್ದಾರೆ.

ಎಸ್‌ಐಆರ್ ಆರಂಭವಾದಾಗಿನಿಂದ ಚುನಾವಣಾ ಆಯೋಗಕ್ಕೆ ಮೂರು ಪತ್ರಗಳನ್ನು ಬರೆದಿದ್ದಾರೆ. ತಮ್ಮ ಮೂರನೇ ಪತ್ರದಲ್ಲಿ, ಮಮತಾ ಬ್ಯಾನರ್ಜಿ ಅವರು ''ಚುನಾವಣಾ ಆಯೋಗವು ರಾಜಕೀಯ ಪಕ್ಷಪಾತ, ಸಂವೇದನಾಶೀಲತೆ ಮತ್ತು ವಿಚಾರಣೆಯ ಸಮಯದಲ್ಲಿ ಅತಿರೇಕದಿಂದ ವರ್ತಿಸುತ್ತಿದೆ'' ಎಂದು ಆರೋಪಿಸಿದ್ದಾರೆ.

''ಎಸ್‌ಐಆರ್ ಗುರಿ ಮತದಾರರ ಪಟ್ಟಿಯ ತಿದ್ದುಪಡಿ ಅಥವಾ ಸೇರ್ಪಡೆಯ ರೀತಿ ಕಾಣುತ್ತಿಲ್ಲ. ಉದ್ದೇಶ ಪೂರ್ವಕವಾಗಿಯೇ ಹೆಸರನ್ನು ಅಳಿಸುವಿಕೆ ಅಥವಾ ಮತದಾರರನ್ನು ಹೊರಗಿಡುವ ಕೆಲಸ ನಡೆಯುತ್ತಿದೆ. ಈ ಪ್ರಕ್ರಿಯೆಯಿಂದ ಸಾಂವಿಧಾನಿಕ ಮೌಲ್ಯಗಳು ದುರ್ಬಲಗೊಳ್ಳುತ್ತವೆ'' ಎಂದು ದೂರಿದ್ದಾರೆ.

ಮಮತಾ ಬ್ಯಾನರ್ಜಿ / ಎಸ್‌ಐಆರ್

ಕೇಂದ್ರ ಚುನಾವಣಾ ಆಯೋಗವು ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಕಳೆದ ವರ್ಷ ಬಿಹಾರದಿಂದ ಆರಂಭ ಮಾಡಿ, ದೇಶದಲ್ಲಿನ ಎಲ್ಲಾ ರಾಜ್ಯಗಳಿಗೂ ವಿಸ್ತರಿಸಿದೆ. ಅದೇ ರೀತಿ ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆಯುತ್ತಿದೆ. ಈ ವೇಳೆ ಒಬ್ಬ ಮತದಾರರ ಹೆಸರನ್ನೂ ಕೈಬಿಟ್ಟರೆ ಚುನಾವಣಾ ಆಯೋಗದ ಕೇಂದ್ರ ಕಚೇರಿ ಮುಂದೆ ನಾನೀರುವೆ ಎಂದು ಮಮತಾ ಬ್ಯಾನರ್ಜಿ ಅವರು ಎಚ್ಚರಿಕೆಯನ್ನು ಕೊಟ್ಟಿದ್ದಾರೆ.

ಎಸ್‌ಐಆರ್ ಗೆ ಬಳಕೆಯಾಗಿರುವ ಅಪ್ಲಿಕೇಷನ್ ಅನ್ನು ಬಿಜೆಪಿಯ ಐಟಿ ಸೆಲ್ ತಯಾರಿಸಿದ್ದು ಎಂಬ ಗಂಭೀರ ಆರೋಪವನ್ನು ಮಾಡಿದ ಮಮತಾ ಬ್ಯಾನರ್ಜಿ ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದಾರೆ.

''ಎಸ್‌ಐಆರ್ ನಿಂದಾಗಿ ಹಲವಾರು ಬಿಎಲ್‌ಓಗಳು ಸಾವನ್ನಪ್ಪಿದ್ದಾರೆ. ಎಸ್‌ಐಆರ್ ಪ್ರಕ್ರಿಯೆಯಲ್ಲಿ ಚುನಾವಣಾ ಆಯೋಗ ಬಿಎಲ್‌ಓಗಳನ್ನು ನಡೆಸಿಕೊಂಡ ರೀತಿಯ ವಿರುದ್ಧ ಕೋರ್ಟ್ ಮೊರೆ ಹೋಗುತ್ತೇವೆ'' ಎಂದು ಹೇಳಿದ್ದರು.

ಡಿಸೆಂಬರ್ 16ರಂದು ಚುನಾವಣಾ ಆಯೋಗವು ಎಸ್‌ಐಆರ್ ಪ್ರಕ್ರಿಯೆಯ ಮೊದಲ ಹಂತದ ಪಶ್ಚಿಮ ಬಂಗಾಳ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಿತ್ತು. ಇದರಲ್ಲಿ 58 ಲಕ್ಷಕ್ಕೂ ಹೆಚ್ಚು ಮತದಾರರನ್ನು ಹೊರಗಿಡಲಾಯಿತು. 7.66 ಕೋಟಿಯಿದ್ದ ಮತದಾರರ ಸಂಖ್ಯೆ 7.08 ಕೋಟಿಗೆ ಇಳಿದಿತ್ತು.

ಕಳೆದ ಕೆಲ ದಿನಗಳ ಹಿಂದೆ ಪಶ್ಚಿಮ ಬಂಗಾಳದಲ್ಲಿನ ಇಂಡಿಯನ್ ಪೊಲಿಟಿಕ್ ಆ್ಯಕ್ಷನ್ ಕಮಿಟಿ (ಐ-ಪ್ಯಾಕ್) ಕಚೇರಿ ಮತ್ತು ಅದರ ನಿರ್ದೇಶಕ ಪ್ರತೀಕ್ ಜೈನ್ ಅವರ ಮನೆಯಲ್ಲಿ ಜಾರಿ ನಿರ್ದೇಶನಾಲಯದ (ಇ.ಡಿ) ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಈ ಪ್ರತೀಕ್ ಜೈನ್ ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ ಪಕ್ಷದ ಐಟಿ ವಿಭಾಗ ಮುಖ್ಯಸ್ಥರು ಹೌದು.

ಇ.ಡಿ ಅಧಿಕಾರಿಗಳು ನಮ್ಮ ಐಟಿ ಸೆಲ್ ಉಸ್ತುವಾರಿಯ ನಿವಾಸ ಮತ್ತು ಕಚೇರಿ ಮೇಲೆ ದಾಳಿ ನಡೆಸಿದ್ದಾರೆ. ಅವರು ನನ್ನ ಪಕ್ಷಕ್ಕೆ ಸಂಬಂಧಿಸಿದ ರಹಸ್ಯ ದಾಖಲೆಗಳನ್ನು ಮತ್ತು ಹಾರ್ಡ್ ಡಿಸ್ಕ್ ಗಳನ್ನು ವಶಕ್ಕೆ ತೆಗೆದುಕೊಳ್ಳುತ್ತಿದ್ದರು ಎಂದು ಮಮತಾ ಬ್ಯಾನರ್ಜಿ ಆರೋಪ ಮಾಡಿದ್ದಾರೆ.

ನಾಲ್ಕು ವರ್ಷಗಳ ಹಿಂದಿನ ಅಕ್ರಮ ಹಣ ವರ್ಗಾವಣೆಯ ಆಧಾರದ ಮೇಲೆ ಈ ದಾಳಿಯನ್ನು ನಡೆಸಲಾಗಿದೆ ಎಂದು ಇ.ಡಿ ಅಧಿಕಾರಿಗಳು ತಿಳಿಸಿದ್ದಾರೆ. ಈಗ ಇದೇ ದಾಳಿ ರಾಜಕೀಯ ಹೋರಾಟಕ್ಕೆ ಹಾಗೂ ಟಿಎಂಸಿ ಆಕ್ರೋಶಕ್ಕೆ ಕಾರಣವಾಗಿದೆ.

ಇ.ಡಿ ಅಧಿಕಾರಿಗಳು ದಾಳಿ ನಡೆಸುತ್ತಿದ್ದ ಸಂದರ್ಭದಲ್ಲಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಸ್ಥಳಕ್ಕೆ ಬಂದು ಪಕ್ಷಕ್ಕೆ ಸಂಬಂಧಿಸಿದ್ದು ಎಂದು ಹೇಳಿಕೊಳ್ಳುವ ಅನೇಕ ದಾಖಲೆಗಳನ್ನು ತೆಗೆದುಕೊಂಡು ಹೋಗಿದ್ದಾರೆ. ''ಮುಂಬರುವ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ಪಕ್ಷದ ಕಾರ್ಯತಂತ್ರ ಮತ್ತು ಅಭ್ಯರ್ಥಿಗಳ ವಿವರಗಳು ಅದರಲ್ಲಿದ್ದವು. ನಾನು ಅವುಗಳನ್ನು ಮನೆಯಿಂದ ಹೊರತಂದಿದ್ದೇನೆ'' ಎಂದು ಮಮತಾ ಸುದ್ದಿಗಾರರಿಗೆ ತಿಳಿಸಿದ್ದಾರೆ.

''ಮುಂದಿನ ವಿಧಾನಸಭೆ ಚುನಾವಣೆಯ ಎಲ್ಲಾ ಕಾರ್ಯತಂತ್ರಗಳು ಹಾಗೂ ಅಭ್ಯರ್ಥಿಗಳ ವಿವರಗಳು ಐ-ಪ್ಯಾಕ್ ಕಚೇರಿಯಲ್ಲಿದ್ದವು. ಅವುಗಳನ್ನು ಕದಿಯುವ ಉದ್ದೇಶದಿಂದಲೇ ಇ.ಡಿ ಅಧಿಕಾರಿಗಳು ದಾಳಿಯನ್ನು ನಡೆಸಿದ್ದಾರೆ'' ಎಂದು ಆರೋಪಿಸಿದ್ದಾರೆ.

ಕಳೆದ ಹನ್ನೊಂದು ವರ್ಷಗಳಿಂದ ಬಿಜೆಪಿಯು ಚುನಾವಣಾ ಆಯೋಗವನ್ನು ತಮಗೆ ಬೇಕಾದಂತೆ ಉಪಯೋಗಿಸಿಕೊಳ್ಳುತ್ತಿದೆ ಎಂಬ ಆರೋಪಗಳಿವೆ. ಅದೇ ರೀತಿಯಲ್ಲಿ ಇ.ಡಿ, ಐಟಿ, ಸಿಬಿಐ ಗಳನ್ನು ಬಳಸಿಕೊಂಡು ವಿರೋಧ ಪಕ್ಷಗಳ ಅಸ್ತಿತ್ವವನ್ನು ಕಸಿದುಕೊಳ್ಳುತ್ತಿದೆ.

ಈಗ ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆ ಸಮೀಪಿಸುತ್ತಿರುವ ಹೊತ್ತಿನಲ್ಲಿ ಇ.ಡಿ ನಡೆಸಿರುವ ದಾಳಿ ಮತ್ತು ಅದರ ಸಮಯವು ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ. ಇದನ್ನೇ ರಾಜಕೀಯ ಅಸ್ತ್ರವಾಗಿ ಬಳಸಿಕೊಳ್ಳುತ್ತಿರುವ ಮಮತಾ ಬ್ಯಾನರ್ಜಿ ಮತ್ತು ಟಿಎಂಸಿ, ''ಇ.ಡಿ ರಾಜಕೀಯ ಪ್ರೇರಿತವಾಗಿ ದಾಳಿ ನಡೆಸಿದೆ. ಬರುವ ಚುನಾವಣೆಯನ್ನು ಗೆಲ್ಲಲು ಬಿಜೆಪಿಯವರು ವಾಮಮಾರ್ಗವನ್ನು ಅನುಸರಿಸುತ್ತಿದ್ದಾರೆ'' ಎಂದು ಆರೋಪಿಸಿದ್ದಾರೆ.

ಒಂದು ಕಡೆ ಚುನಾವಣಾ ಆಯೋಗ ನಡೆಸುತ್ತಿರುವ ಎಸ್‌ಐಆ,ರ್ ಮತ್ತೊಂದು ಕಡೆ ಇ.ಡಿ ಮತ್ತು ಬಿಜೆಪಿ. ಇವೆರಡನ್ನು ಒಟ್ಟಿಗೆ ಎದುರು ಹಾಕಿಕೊಂಡಿರುವ ಮಮತಾ ಬ್ಯಾನರ್ಜಿ ಅವರ ಹೋರಾಟ ಗೆಲ್ಲಬಹುದೇ ಎಂಬ ಪ್ರಶ್ನೆ ಮುನ್ನೆಲೆಗೆ ಬಂದಿದೆ.

ಬೀದರ್ ವಿಬಿ- ಜಿ ರಾಮ್ ಜಿ ಕರಾಳ ಕಾಯ್ದೆ ಹಿಂಪಡೆಯಲು ದೇಶಾದ್ಯಂತ ಆಂದೋಲನ : ಸಚಿವ ಈಶ್ವರ ಖಂಡ್ರೆ



ಕೇಂದ್ರ ಸರ್ಕಾರ ಹೊಸತಾಗಿ ಜಾರಿಗೆ ತಂದಿರುವ ವಿಕಸಿತ ಭಾರತ ಉದ್ಯೋಗ ಖಾತರಿ ಮತ್ತು ಜೀವನೋಪಾಯ ಮಿಷನ್ ಗ್ರಾಮೀಣ (ವಿಬಿ- ಜಿ ರಾಮ್ ಜಿ) ಕಾಯ್ದೆಯನ್ನು ಹಿಂಪಡೆದು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ಮನರೇಗಾ) ಕಾಯ್ದೆಯನ್ನು ಮರುಸ್ಥಾಪಿಸಬೇಕೆಂದು ಆಗ್ರಹಿಸಿ ಕಾಂಗ್ರೆಸ್ ಪಕ್ಷ ದೇಶಾದ್ಯಂತ ಮನರೇಗಾ ಬಚಾವೋ ಅಭಿಯಾನವನ್ನು ಹಮ್ಮಿಕೊಂಡಿದೆ ಎಂದು ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪ್ರಧಾನಿ ಮಂತ್ರಿ ಮನಮೋಹನ್ ಸಿಂಗ್ ನೇತೃತ್ವದ ಯುಪಿಎ ಸರ್ಕಾರವು 2005ರಲ್ಲಿ ನರೇಗಾ ಯೋಜನೆ ಜಾರಿಗೊಳಿಸಿತು. ಗ್ರಾಮೀಣ ಭಾಗದ ಅನಕ್ಷರಸ್ಥ ನಿರುದ್ಯೋಗಿಗಳಿಗೆ ಉದ್ಯೋಗ ಖಾತ್ರಿ ಮಾಡುವ ಈ ಕಾಯಿದೆ ಜಾಗತಿಕ ಮಟ್ಟದಲ್ಲಿ ಮೆಚ್ಚುಗೆ ಪಡೆದಿತ್ತು. ಭಾರತದಲ್ಲಿ ಹೊಸ ಆರ್ಥಿಕ ಮಾದರಿ ಹುಟ್ಟು ಹಾಕಿದ್ದು ಈಗ ಇತಿಹಾಸ ಎಂದು ಭಾನುವಾರ ಬೀದರ್‌ನಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ಮಹಿಳೆಯರು, ದುರ್ಬಲ ವರ್ಗದವರು, ದಲಿತರು, ತಳ ಸಮುದಾಯಗಳು ನೆಮ್ಮದಿಯಿಂದ, ಗೌರವದಿಂದ, ಸ್ವಾಭಿಮಾನದಿಂದ ಬದುಕು ಕಟ್ಟಿಕೊಳ್ಳಲು ನೆರವಾಗಿದ್ದ ಮನರೇಗಾ ಹಳ್ಳಿಯ ಜನರ ಜೀವನಕ್ಕೆ ಹೊಸ ದಿಕ್ಕು ತೋರಿಸಿತ್ತು. ಅದನ್ನು ಇಂದಿನ ಕೇಂದ್ರದ ಬಿಜೆಪಿ ಸರ್ಕಾರ ಹೆಸರು ಬದಲಾಯಿಸಿ ವಿಬಿ-ಜಿ ರಾಮ್ ಜಿ ಎಂಬ ಕರಾಳ ಕಾಯ್ದೆ ಜಾರಿಗೆ ತಂದಿದೆ ಎಂದು ಖಂಡಿಸಿದರು.

ಗ್ರಾಮಗಳು ಅಭಿವೃದ್ಧಿ ಆಗಬೇಕು ಎನ್ನುವುದು ಮಹಾತ್ಮ ಗಾಂಧೀಜಿ ಅವರ ಪರಿಕಲ್ಪನೆ. ಆ ಕಾರಣದಿಂದಲೇ ಮನರೇಗಾ ಯೋಜನೆ ರೂಪಿಸಲಾಗಿತ್ತು. ಆದರೆ ಅದಕ್ಕೆ ವಿರುದ್ಧವಾಗಿ ಕೇಂದ್ರ ಸರ್ಕಾರ ನಡೆದುಕೊಂಡು ಗಾಂಧೀಜಿ ಹೆಸರು ಅಳಿಸುವ ದುಸ್ಸಾಹಕ್ಕೆ ಕೈಹಾಕಿದೆ. ಜಿಎಸ್‌ಟಿ ಸೇರಿದಂತೆ ಬೇರೆ ಬೇರೆ ತೆರಿಗೆಗಳನ್ನು ರಾಜ್ಯವು ಕೇಂದ್ರಕ್ಕೆ ನೀಡುತ್ತದೆ. ಆದರೆ ನಮಗೆ ನಮ್ಮ ರಾಜ್ಯದ ಪಾಲನ್ನು ಕೇಂದ್ರ ಸರ್ಕಾರ ನೀಡುತ್ತಿಲ್ಲ. ನಮ್ಮ ದೇಶದಲ್ಲಿ 12 ಕೋಟಿ ಹಾಗೂ ಕರ್ನಾಟಕದಲ್ಲಿ 78.18 ಲಕ್ಷ ಕ್ರಿಯಾಶೀಲ ನರೇಗಾ ಕೂಲಿಕಾರರಿದ್ದಾರೆ. ಈ ಎಲ್ಲರ ಉದ್ಯೋಗದ ಹಕ್ಕನ್ನು ಮೋದಿ ಸರ್ಕಾರ ನೀರುಪಾಲು ಮಾಡಿದೆ ಎಂದು ದೂರಿದರು.

ಬೀದರ್ ಜಿಲ್ಲೆಯಲ್ಲಿ 2.39 ಲಕ್ಷ ಒಟ್ಟು ಮನರೇಗಾ ಕೂಲಿ ಕಾರ್ಮಿಕರು ಜಾಬ್ ಕಾರ್ಡ್ ಹೊಂದಿದ್ದಾರೆ. ಅದರಲ್ಲಿ1.40 ಲಕ್ಷ ಕಾರ್ಮಿಕರು ಕ್ರಿಯಾಶೀಲರಾಗಿ ಕೂಲಿ ಮಾಡುತ್ತಿದ್ದಾರೆ. ಮನರೇಗಾ ಕಾಮಗಾರಿ ಬಡ ಕುಟುಂಬಗಳಿಗೆ ಆರ್ಥಿಕ ಸಬಲರಾಗಲು ಸಹಕಾರಿಯಾಗಿದೆ. ಈ ಹಿಂದೆ ಕೇಂದ್ರದ ಪಾಲು ಶೇ 90-10 ರಷ್ಟು ಇತ್ತು. ಆದರೆ ಈಗ ಯೋಜನೆಯ ಸ್ವರೂಪ ಬದಲಿಸಿ ಕೇಂದ್ರದ್ದು ಶೇ 60-40 ಎಂದಿದ್ದಾರೆ. ಈ ಹಿಂದೆ ಅಂಗನವಾಡಿ ಕಟ್ಟಡ, ಕೊಟ್ಟಿಗೆ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ನರೇಗಾದಡಿ ಅನುಷ್ಠಾನಗೊಳಿಸಬಹುದಿತ್ತು. ಹೊಸ ಕಾಯ್ದೆಯಿಂದ ಬಂಡವಾಳಿಶಾಹಿಗಳಿಗೆ ಅನುಕೂಲವಿದೆ ಎಂದರು.

ಕೇಂದ್ರ ಬಿಜೆಪಿ ಸರ್ಕಾರದ ಸಾಧನೆ ಶೂನ್ಯಯಾಗಿದೆ. ಅವರ ಸರ್ಕಾರ ಬಂದ ಬಳಿಕ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಅನೇಕ ಯೋಜನೆಗಳ ಹೆಸರುಗಳನ್ನು ಬದಲಾವಣೆ ಮಾಡುತ್ತಿದ್ದಾರೆ. ಅದೇ ಮಾದರಿಯಲ್ಲಿ ಇದೀಗ ಮನರೇಗಾ ಹೆಸರು ಬದಲಾಯಿಸಿ ಕಾರ್ಮಿಕ ವಿರೋಧಿ ನಿಲುವು ತಾಳಿದ್ದಾರೆ ಎಂದು ಅವರು, ವಿಬಿ- ಜಿ ರಾಮ್ ಜಿ ಕಾಯ್ದೆ ಜಾರಿಯಾದರೆ ಗ್ರಾಮೀಣ ಭಾಗದಲ್ಲಿ ನಿರುದ್ಯೋಗ ಪ್ರಮಾಣ ಹೆಚ್ಚಳ, ಉದ್ಯೋಗದಲ್ಲಿ ಮಹಿಳೆಯರ ಪಾಲುದಾರಿಕೆ ಇಳಿಕೆ, ಕನಿಷ್ಠ ವೇತನ ರಕ್ಷಣೆಯಿಲ್ಲದೆ ಕಾರ್ಮಿಕರು ಸಂಕಷ್ಟಕ್ಕೆ ತಳ್ಳಲ್ಪಡುತ್ತಾರೆ. ದಲಿತ ಮತ್ತು ಆದಿವಾಸಿ ಕುಟುಂಬಗಳ ಮೇಲೆ ಶೋಷಣೆ ಮತ್ತು ಒತ್ತಡ ಅಧಿಕ ಆಗುತ್ತದೆ. ಗ್ರಾಮೀಣ ಸಂಕಷ್ಟ ತೀವ್ರಗೊಳ್ಳುತ್ತದೆ ಎಂದು ತಿಳಿಸಿದರು.

ಈ ಹಿಂದಿನ ಮನರೇಗಾ ಕಾಯ್ದೆ ಮರುಸ್ಥಾಪಿಸಬೇಕು. ಜನರ ಉದ್ಯೋಗದ ಹಕ್ಕನ್ನು ಪುನರ್ ಸ್ಥಾಪಿಸಬೇಕು. ದೇಶಾದ್ಯಂತ ಮನರೇಗಾ ಅಡಿ ಕೂಲಿ ಮಾಡುವ ಜನರಿಗೆ ಪ್ರತಿ ದಿನಕ್ಕೆ ಕನಿಷ್ಠ 400 ವೇತನ ನೀಡಬೇಕು. ಬಡವರ ಹೊಟ್ಟೆಮೇಲೆ ಹೊಡೆದು ರಕ್ತಹೀರುವ ಕಾರ್ಯ ಮಾಡುತ್ತಿರುವ ಕೇಂದ್ರದ ವಿರುದ್ಧ ದೇಶ, ರಾಜ್ಯಾದ್ಯಂತ ಕಾಂಗ್ರೆಸ್ ಪಕ್ಷ ಗ್ರಾಮೀಣ ಮಟ್ಟದಿಂದ ಮನರೇಗಾ ಬಚಾವೋ ಆಂದೋಲನ ನಿರಂತರವಾಗಿ ಮುಂದುವರೆಯುತ್ತದೆ ಎಂದರು.

ಬಿಜೆಪಿಯವರು ನಕಲಿ ರಾಷ್ಟ್ರವಾದಿಗಳು :

ಸತ್ಯ, ಅಹಿಂಸೆ ಹಾಗೂ ಶಾಂತಿಯ ಅಸ್ತ್ರ ಹಿಡಿದು ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಗಾಂಧೀಜಿಯವರ ಹೆಸರು ಅಳಿಸುವ ಕೇಂದ್ರದ ಬಿಜೆಪಿ ಸರ್ಕಾರಕ್ಕೆ ಮಾನ ಮರ್ಯಾದೆ ಇದೆಯಾ? ಸರ್ವರಿಗೂ ಸಮಬಾಳು- ಸರ್ವರಿಗೂ ಸಮಪಾಲು ಕೊಟ್ಟು ಎಲ್ಲರ ಅಭಿವೃದ್ಧಿ ಮಾಡುವ ಮೂಲಕ ದೇಶದಲ್ಲಿ ರಾಮರಾಜ್ಯ ನಿಜವಾಗಿಯೂ ಸ್ಥಾಪಿಸಿದ್ದು ಕಾಂಗ್ರೆಸ್ ಪಕ್ಷವಾಗಿದೆ ಎಂದು ಈಶ್ವರ ಖಂಡ್ರೆ ಅವರು ಪತ್ರಕರ್ತರ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಮನರೇಗಾ ಯೋಜನೆಯಲ್ಲಿ ಅವ್ಯವಹಾರ ಆಗಿದ್ದು, ಅದನ್ನು ತಡೆಯಲು ಹೊಸ ಕಾಯ್ದೆ ಜಾರಿಗೆ ತರಲಾಗಿದೆ ಎಂದು ಬಿಜೆಪಿ ಹೇಳಿರುವುದರ ಕುರಿತಾದ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, 2014ರಲ್ಲಿ ಬಿಜೆಪಿ ಸುಳ್ಳು ಹೇಳಿ ಅಧಿಕಾರಕೇರಿದರು. ಜನರಿಗೆ ಭರವಸೆ ನೀಡಿದ ಕಪ್ಪು ಹಣ, 2 ಕೋಟಿ ಉದ್ಯೋಗ ಸೃಷ್ಟಿ, ರೈತರ ಆದಾಯ ದ್ವಿಗುಣ ಸೇರಿ ಯಾವುದೇ ಭರವಸೆ ಈಡೇರಿಸಿಲ್ಲ ಎಂದು ಹೇಳಿದರು.

2019ರ ಲೋಕಸಭಾ ಚುನಾವಣೆಯಲ್ಲಿ ಬಾಲಕೋಟ್ ದಾಳಿ ನಡೆಸಿ ಜನರಿಗೆ ಭಯ ವಾತಾವರಣ ನಿರ್ಮಿಸಿ ಎರಡನೇ ಬಾರಿಗೆ ಗೆದ್ದು ಬಂದರು. ಕಳೆದ ಲೋಕಸಭಾ ಚುನಾವಣೆಯಲ್ಲಿ ಓಟ್ ಚೋರಿ ನಡೆಸಿ ಮೂರನೇ ಬಾರಿಗೆ ಅಧಿಕಾರ ಹಿಡಿದಿದ್ದಾರೆ ಎಂದ ಅವರು, ರಾಷ್ಟ್ರೀಯತೆಯೇ ದೇಶಭಕ್ತಿ ಎನ್ನುವ ಬಿಜೆಪಿಯವರು ನಕಲಿ ರಾಷ್ಟ್ರವಾದಿಗಳು. ಇವರ ಇತಿಹಾಸ ನೋಡಿದರೆ ದೇಶಕ್ಕಾಗಿ ಹೋರಾಟ ಮಾಡಿದ ಉದಾಹರಣೆಗಳಿಲ್ಲ ಎಂದು ಟೀಕಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಭೀಮರಾವ್ ಪಾಟೀಲ್, ಡಾ.ಚಂದ್ರಶೇಖರ ಪಾಟೀಲ್, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ ಸೇರಿದಂತೆ ಸಂಜಯ ಜಾಗೀರದಾರ್, ವಿನೋದ ಅಪ್ಪೆ ಮತ್ತಿರರಿದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR